# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 225 RNI Number : KNKAN/25/A2770 26-08-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :225 ರಾಯಚೂರು 26-08-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563


# ರಾಜ್ಯಪಾಲರ ನಿರ್ಧಾರದ ಮೇಲೆ ನಾಗೇಂದ್ರ ಭವಿಷ್ಯ ನಿರ್ಧಾರ

ಬೆಂಗಳೂರು,ಆ.25-

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ವರ್ಗಾವಣೆ ಹಗರಣಕ್ಕೆ ಸಂಬಂಧಿಸಿದಂತೆ, ಸಚಿವ ಬಿ.ನಾಗೇಂದ್ರ ವಿರುದ್ಧ ಕಾನೂನು ಕ್ರಮ ಜರುಗಿಸಲು (ಪ್ರಾಸಿಕ್ಯೂಷನ್) ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು, ಸಚಿವ ಸಂಪುಟ ಸಭೆಯ ಅಭಿಪ್ರಾಯ ಕೇಳಲು ಮುಂದಾಗಿರುವುದು ಕುತೂಹಲ ಮೂಡಿಸಿದೆ. ಒಂದು ವೇಳೆ ಸಚಿವ ಸಂಪುಟ ಸಭೆಯು ರಾಜ್ಯಪಾಲರ ಪತ್ರಕ್ಕೆ ಮನ್ನಣೆ ಕೊಡದಿದ್ದರೆ, ರಾಜ್ಯಪಾಲರು ಮುಂದೆ ತೆಗೆದುಕೊಳ್ಳುವ ನಿರ್ಧಾರ ಸಚಿವ ನಾಗೇಂದ್ರ ರಾಜಕೀಯ ಭವಿಷ್ಯವನ್ನು ತೀರ್ಮಾನ ಮಾಡಲಿದೆ.

ಜನಪ್ರತಿನಿಧಿಗಳ ವಿರುದ್ಧ ವಿಚಾರಣೆ ನಡೆಸಲು ಸಚಿವ ಸಂಪುಟ ಒಪ್ಪಿಗೆ ಕಡ್ಡಾಯ ಎಂಬುದು ಕೇವಲ ಔಪಚಾರಿಕ ಪ್ರಕ್ರಿಯೆ ಎಂದು ಹೇಳಲಾಗುತ್ತದೆ. ಏಕೆಂದರೆ, ಈ ಹಿಂದೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ವಿರುದ್ಧ ಡಿ ನೋಟಿಫಿಕೇಷನ್ ಪ್ರಕರಣದಲ್ಲಿ ಲೋಕಾಯುಕ್ತ ಅಧಿಕಾರಿಗಳು ವಿಚಾರಣೆಗೆ ಒಳಪಡಿಸಲು ಅನುಮತಿ ನೀಡಬೇಕೆಂದು ಅಂದಿನ ರಾಜ್ಯಪಾಲ ಹಂಸರಾಜ್ ಭಾರದ್ವಾಜ್ ಅವರಿಗೆ ಪತ್ರ ಬರೆದಿದ್ದರು.

ಈ ಸಂದರ್ಭದಲ್ಲಿ ಸಚಿವ ಸಂಪುಟ ಸಭೆಯು ಯಡಿಯೂರಪ್ಪ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಬಾರದು ಎಂದು ಒಂದು ಸಾಲಿನ



ನಿರ್ಣಯವನ್ನು ತೆಗೆದುಕೊಂಡಿತ್ತು.ಆದರೆ ರಾಜ್ಯಪಾಲರು ಸಚಿವ ಸಂಪುಟ ಸಭೆಯನಿರ್ಣಯವನ್ನು ತಿರಸ್ಕರಿಸಿದ್ದರು ಎಂಬುದು ಉಲ್ಲೇಖ.ರಾಜ್ಯಪಾಲರ ಕಚೇರಿಯು ಈ ವಿಷಯದಲ್ಲಿ ಕಾನೂನು ಇಲಾಖೆಯ ಅಭಿಪ್ರಾಯ ಪಡೆಯುವ ಪ್ರಕ್ರಿಯೆಗೆ ಮುಂದಾಗಿದೆ. ರಾಜ್ಯಪಾಲರು ಸಚಿವರ ವಿರುದ್ಧದ ಪ್ರಾಸಿಕ್ಯೂಷನ್ ಅನುಮತಿ ವಿಚಾರದಲ್ಲಿ ಸರ್ಕಾರದ ನೆರವು ಮತ್ತು ಸಲಹೆಯನ್ನು ಪಡೆಯಬೇಕೇ ಎಂಬ ಪ್ರಶ್ನೆಯೂ ಇದರೊಂದಿಗೆ ಮುನ್ನೆಲೆಗೆ ಬಂದಿದೆ.

ವಾಲ್ಮೀಕಿ ನಿಗಮದ ನಿಧಿಯ ದುರುಪಯೋಗ ಮತ್ತು ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ತನಿಖಾ ದಳ (ಸಿಬಿಐ) ಸಚಿವ ನಾಗೇಂದ್ರ ಅವರ ವಿರುದ್ಧ ಪ್ರಾಸಿಕ್ಯೂಷನ್ ಅನುಮತಿ ಕೋರಿ ರಾಜ್ಯಪಾಲರಿಗೆ ಅಧಿಕೃತ ಪತ್ರ ಬರೆದಿದೆ. ರಾಜ್ಯಪಾಲರ ಕಚೇರಿಯು (ಲೋಕಭವನ) ಈ ಕುರಿತು ಕಾನೂನು ಇಲಾಖೆ ಹಾಗೂ ತಜ್ಞರ ಸಲಹೆಯನ್ನು ಪಡೆದುಕೊಂಡಿದ್ದು, ಸಚಿವ ಸಂಪುಟದ ಅಭಿಪ್ರಾಯ ಮತ್ತು ಸಂವಿಧಾನಿಕ ನಿಯಮಗಳ ಅಡಿಯಲ್ಲಿ ಮುಂದಿನ ನಿರ್ಧಾರ ಕೈಗೊಳ್ಳಲು ಸಿದ್ಧತೆ ನಡೆಸಿದೆ. ಸಿಬಿಐ ರಾಜ್ಯ ಸರ್ಕಾರಕ್ಕೆ ಮೊದಲು ಮಾಹಿತಿ ಅಥವಾ ಪತ್ರ ನೀಡಬೇಕಾಗಿತ್ತು ಎಂಬುದು ಸರ್ಕಾರದ ವಾದವಾಗಿದೆ. ಇದೇ ವಿಚಾರ ಈಗ ಕಾನೂನು ಮತ್ತು ಸಂವಿಧಾನಾತಕ ಚರ್ಚೆಯನ್ನೂ ಹುಟ್ಟುಹಾಕಿದೆ. ವಿಶೇಷವಾಗಿ, ರಾಜ್ಯ ವ್ಯಾಪ್ತಿಯಲ್ಲಿ ಸಿಬಿಐ ತನಿಖೆ ನಡೆಸುವ ಅಧಿಕಾರ, ರಾಜ್ಯದ ಒಪ್ಪಿಗೆ, ಹಾಗೂ ಹಾಲಿ ಸಚಿವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಸಂದರ್ಭದಲ್ಲಿ ರಾಜ್ಯಪಾಲರ ಅಧಿಕಾರದ ಮಿತಿಗಳೇನು ಎಂಬುದು ಪ್ರಮುಖ ಪ್ರಶ್ನೆಗಳಾಗಿವೆ.

ಹಿನ್ನೆಲೆ ಮತ್ತು ಕಾನೂನು ಚೌಕಟ್ಟು:

2024ರ ಲೋಕಸಭಾ ಚುನಾವಣೆಗೆ ಮುನ್ನ ವಾಲ್ಮೀಕಿ ನಿಗಮದಲ್ಲಿ ನಡೆದ ಹಣಕಾಸು ಅಕ್ರಮಗಳು ಮತ್ತು ವರ್ಗಾವಣೆ ಪ್ರಕರಣಗಳು ಬೆಳಕಿಗೆ ಬಂದಾಗ ಬಿ. ನಾಗೇಂದ್ರ ಅವರು ಎಸ್‌ಟಿ ಕಲ್ಯಾಣ ಸಚಿವರಾಗಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ಕ್ರಿಮಿನಲ್ ಪಿತೂರಿ ಆರೋಪದ ಮೇರೆಗೆ ಹಾಗೂ ಇಡಿ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಕಾನೂನು ಕ್ರಮಕ್ಕೆ ಅನುಮತಿ ಕೋರಿ ಪ್ರತ್ಯೇಕ ಮನವಿಗಳನ್ನು ಲೋಕಭವನಕ್ಕೆ ಸಲ್ಲಿಸಿವೆ.

ಈ ಕುರಿತು ಪ್ರತಿಕ್ರಿಯಿಸಿದ್ದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಸಚಿವರೊಬ್ಬರ ವಿರುದ್ಧ ಕಾನೂನು ಕ್ರಮ ಜರುಗಿಸಲು ರಾಜ್ಯಪಾಲರು ನೇರವಾಗಿ ಅನುಮತಿ ನೀಡಬಹುದೇ ಎಂಬ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದು, ಇದಕ್ಕೆ ರಾಜ್ಯ ಸರ್ಕಾರದ ಒಪ್ಪಿಗೆ ಕಡ್ಡಾಯವಾಗಿ ಅಗತ್ಯವಿರುತ್ತದೆ ಎಂದು ಪ್ರತಿಪಾದಿಸಿದ್ದರು. ಭಾರತೀಯ ಕಾನೂನು ಚೌಕಟ್ಟಿನನ್ವಯ, ದೆಹಲಿ ವಿಶೇಷ ಪೊಲೀಸ್ ಸ್ಥಾಪನಾ ಕಾಯಿದೆ, 1946ರ ಸೆಕ್ಷನ್ 6ರ ಪ್ರಕಾರ ಸಿಬಿಐ ತನ್ನ ತನಿಖಾ ವ್ಯಾಪ್ತಿಯನ್ನು ಚಲಾಯಿಸಲು ಸಾಮಾನ್ಯವಾಗಿ ರಾಜ್ಯ ಸರ್ಕಾರದ ಒಪ್ಪಿಗೆಯನ್ನು ಅಪೇಕ್ಷಿಸುತ್ತದೆ. ಆದಾಗ್ಯೂ, ಉಚ್ಚ ನ್ಯಾಯಾಲಯ ಅಥವಾ ಸರ್ವೋಚ್ಚ ನ್ಯಾಯಾಲಯಗಳು ಸ್ವಯಂಪ್ರೇರಿತವಾಗಿ ಅಥವಾ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಮೇರೆಗೆ ಸಿಬಿಐ ತನಿಖೆಗೆ ಆದೇಶಿಸಿದ ಸಂದರ್ಭಗಳಲ್ಲಿ ಅಥವಾ ಕೇಂದ್ರ ಸರ್ಕಾರದ ನೌಕರರು ಭಾಗಿಯಾದಾಗ ಇಂತಹ ವಿಶೇಷ ಒಪ್ಪಿಗೆಯ ಅಗತ್ಯವಿರುವುದಿಲ್ಲ ಎಂದು ಕಾನೂನು ತಜ್ಞರು ಅಭಿಪ್ರಾಯಪಡುತ್ತಾರೆ. ಸಚಿವರು ಮತ್ತು ಶಾಸಕರ ವಿರುದ್ಧದ ಪ್ರಾಸಿಕ್ಯೂಷನ್ ಮಂಜೂರಾತಿ ವಿಷಯಗಳಲ್ಲಿ ರಾಜ್ಯಪಾಲರು ಏಕಪಕ್ಷೀಯವಾಗಿ ನಿರ್ಧಾರ ಕೈಗೊಳ್ಳಲು ಸಾಧ್ಯವಿದೆಯೇ ಅಥವಾ ಸರ್ಕಾರದ ಒಪ್ಪಿಗೆ ಕಡ್ಡೇಪಾಯವೇ ಎಂಬ ಬಗ್ಗೆ ಲೋಕಭವನವು ಕಾನೂನು ತಜ್ಞರಿಂದ ಸ್ಪಷ್ಟನೆ ಹಾಗೂ ಸಲಹೆಯನ್ನು ಪಡೆದುಕೊಂಡಿದೆ. ಬಂದಿರುವ ಕಾನೂನು ಅಭಿಪ್ರಾಯದ ಮೇರೆಗೆ, ಈ ಪ್ರಕ್ರಿಯೆಯಲ್ಲಿ ರಾಜ್ಯ ಸರ್ಕಾರದ ಅಧಿಕೃತ ಅಭಿಪ್ರಾಯವನ್ನು ಪಡೆದು ಮುಂದಿನ ಕ್ರಮ ಜರುಗಿಸಲು ನಿರ್ಧರಿಸಲಾಗಿದೆ.

## ಕನ್ನಡಿಗರಿಗೆ ಪ್ರವಾದಿ ಮುಹಮ್ಮದ್(ಸ) ಸಂದೇಶ ಪರಿಚಯಿಸುವುದೇ ಸೀರತ್ ಅಭಿಯಾನದ ಉದ್ದೇಶ



ರಾಯಚೂರು,ಆ.25-

ಪ್ರವಾದಿ ಮುಹಮ್ಮದ್(ಸ) ಅವರ ಜೀವನ, ಸಂದೇಶ ಹಾಗೂ ಮಾನವೀಯ ಮೌಲ್ಯಗಳನ್ನು ಕನ್ನಡಿಗರಿಗೆ ಪರಿಚಯಿಸುವ ಉದ್ದೇಶದಿಂದ ಜಮಾಅತೆ ಇಸ್ಲಾಮೀ ಹಿಂದ್ ಕರ್ನಾಟಕದ ವತಿಯಿಂದ ಆ.26ರಿಂದ ಸೆ.6ರವರೆಗೆ ರಾಜ್ಯಾದ್ಯಂತ ಕ್ರಾಂತಿಯ ಜ್ಯೋತಿ: ಪ್ರವಾದಿ ಮುಹಮ್ಮದ್(ಸ) ಸೀರತ್ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಸಮಥ್ ಪಾಷಾ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರವಾದಿ ಮುಹಮ್ಮದ್(ಸ) ಅವರು ಸತ್ಯ, ನ್ಯಾಯ, ಕರುಣೆ, ಮಾನವ ಸಮಾನತೆ, ಮಾನವ ಘನತೆ ಹಾಗೂ ಮಾನವ ಕುಲದ ಏಕತೆಯನ್ನು ಆಧರಿಸಿದ ಸಮಗ್ರ ಮಾನವೀಯ ಕ್ರಾಂತಿಗೆ ನಾಂದಿ ಹಾಡಿದರು. ಅವರ ಸಂದೇಶವನ್ನು ಜನರಿಗೆ ತಲುಪಿಸುವುದು, ಪ್ರವಾದಿಯವರ ಕುರಿತು ಇರುವ ತಪ್ಪು ಕಲ್ಪನೆಗಳನ್ನು ನಿವಾರಿಸುವುದು ಹಾಗೂ ಸಮಾಜದಲ್ಲಿ ಪರಸ್ಪರ ಬಾಂಧವ್ಯ ಮತ್ತು ಸೌಹಾರ್ದವನ್ನು ಬಲಪಡಿಸುವುದು ಅಭಿಯಾನದ ಪ್ರಮುಖ ಉದ್ದೇಶವಾಗಿದೆ ಎಂದರು.

ಅಭಿಯಾನದ ಅಂಗವಾಗಿ ಯೋಗೇಶ್ ಮಾಸ್ಟರ್ ರಚಿಸಿರುವ

3 ನೇ ಪುಟಕ್ಕೆ

## ಆ.27ರಿಂದ ಮಂತ್ರಾಲಯದಲ್ಲಿ ಶ್ರೀರಾಘವೇಂದ್ರ ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವ

ರಾಯಚೂರು:

ಪವಿತ್ರ ತುಂಗಭದ್ರಾ ನದೀತೀರದ ಮಂತ್ರಾಲಯ ಶ್ರೀಕ್ಷೇತ್ರದಲ್ಲಿ ಶ್ರೀರಾಘವೇಂದ್ರ ಗುರುಸಾರ್ವಭೌಮರ 355ನೇ ಆರಾಧನಾ ಸಪ್ತರಾತ್ರೋತ್ಸವವು ಆ.27ರಿಂದ ಸೆ.2ರವರೆಗೆ ವೈಭವದಿಂದ ನಡೆಯಲಿದೆ ಎಂದು ಶ್ರೀಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥರು ತಿಳಿಸಿದ್ದಾರೆ.

ಸೋಮವಾರ ಶ್ರೀಮಠದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆ.27ರಂದು ತಿರುಪತಿ ತಿರುಮಲ ದೇವಸ್ಥಾನದಿಂದ ಆಗಮಿಸುವ ಶ್ರೀನಿವಾಸ ದೇವರ ಶೇಷವಸ್ತ್ರವನ್ನು



ಮೆರವಣಿಗೆಯಲ್ಲಿ ತಂದು ರಾಯರ ಬೃಂದಾವನಕ್ಕೆ ಸಮರ್ಪಿಸಲಾಗುವುದು. ಸಂಜೆ ಧ್ವಜಾರೋಹಣ, ಪ್ರಾರ್ಥನೋತ್ಸವ, ಪ್ರಭಾ ಉತ್ಸವ ಹಾಗೂ ಧಾನ್ಯೋತ್ಸವ ನಡೆಯಲಿವೆ. ಆ.28ರಂದು ಪರಿಮಳ ತೀರ್ಥ ಪುಷ್ಕರಣಿಯಲ್ಲಿ ತೆಪ್ಪೋತ್ಸವ ಜರುಗಲಿದೆ ಎಂದರು.

ಆ.29ರಂದು ಪೂರ್ವಾರಾಧನೆ ಅಂಗವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ವಿಶಿಷ್ಟ ಸೇವೆಗಾಗಿ ಶ್ರೀಮಠದ ವಿದ್ವಾಂಸರಾದ ಡಾ. ಎನ್. ವಾದಿರಾಜಾಚಾರ್ಯ ಹಾಗೂ ತಂಜಾವೂರಿನ ಶಾಸ್ತ್ರ ವಿಶ್ವವಿದ್ಯಾಲಯದ ಉಪಕುಲಪತಿ ವೈದ್ಯನಾಥನ್ ಸುಬ್ರಮಣಿಯನ್ ಅವರಿಗೆ ಶ್ರೀ ರಾಘವೇಂದ್ರ ಅನುಗ್ರಹ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು.

ಆ.30ರಂದು ಮಧ್ಯಾರಾಧನೆ ಪ್ರಯುಕ್ತ ವಿಶೇಷ ಪಂಚಾಮೃತಾಭಿಷೇಕ, ಅಲಂಕಾರ ಹಾಗೂ ಸುವರ್ಣ ರಥೋತ್ಸವ ನಡೆಯಲಿದೆ. ಆ.31ರಂದು ಉತ್ತರಾರಾಧನೆ ಅಂಗವಾಗಿ ಮಂತ್ರಾಲಯದ ರಾಜಬೀದಿಗಳಲ್ಲಿ ಪ್ರಹ್ಲಾದರಾಜ ಉತ್ಸವ ಮೂರ್ತಿಯೊಂದಿಗೆ ಅದ್ದೂರಿ ಮಹಾರಥೋತ್ಸವ ನಡೆಯಲಿದ್ದು, ಹೆಲಿಕಾಪ್ಟರ್ ಮೂಲಕ ಪುಷ್ಪವೃಷ್ಟಿ ಮಾಡಲಾಗುವುದು. ಸೆ.1ರಂದು ಶ್ರೀಮಠದ ಪೂರ್ವಪೀಠಾಧಿಪತಿ ಶ್ರೀ ಸುಜ್ಞಾನೇಂದ್ರ ತೀರ್ಥರ ಆರಾಧನಾ ಮಹೋತ್ಸವ ಹಾಗೂ ಸೆ.2ರಂದು ಸರ್ವಸಮರ್ಪಣೋತ್ಸವದೊಂದಿಗೆ ಆರಾಧನಾ ಕಾರ್ಯಕ್ರಮಗಳು ಸಂಪನ್ನಗೊಳ್ಳಲಿವೆ ಎಂದರು.

ಆರಾಧನಾ ಮಹೋತ್ಸವದ ಸಂದರ್ಭದಲ್ಲಿ ತೆಲುಗು, ಕನ್ನಡ ಹಾಗೂ ಸಂಸ್ಕೃತ ಭಾಷೆಗಳಲ್ಲಿ ವಿದ್ವಾಂಸರಿಂದ ಧಾರ್ಮಿಕ ಮತ್ತು ಆಧ್ಯಾತ್ಮಿಕ ಪ್ರವಚನಗಳು, ಗ್ರಂಥಗಳ ಬಿಡುಗಡೆ, ಸಂಗೀತ, ನೃತ್ಯ ಹಾಗೂ ವಾದ್ಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಪ್ರತಿದಿನ ರಾಯರ ಮೂಲ ಬೃಂದಾವನಕ್ಕೆ ವಿಶೇಷ ಪೂಜೆ, ಪಂಚಾಮೃತಾಭಿಷೇಕ, ಅಲಂಕಾರ, ಸಂಸ್ಥಾನ ಪೂಜೆ ಹಾಗೂ ಅನ್ನಪ್ರಸಾದ ವಿತರಣೆ ನಡೆಯಲಿದೆ.

3 ನೇ ಪುಟಕ್ಕೆ

### ಸ್ವಾಮಿ ವಿವೇಕಾನಂದ ಪದವಿ ಪೂರ್ವ- ಪದವಿ ಕಾಲೇಜಿನಲ್ಲಿ ಸ್ವಾಗತ ಕಾರ್ಯಕ್ರಮ

## ಅಚಲ ನಿರ್ಧಾರದೊಂದಿಗೆ ಅಭ್ಯಾಸ ಮಾಡಿದರೆ ಸಾಧನೆ ಸುಲಭ - ಅಭಿನವ ಶ್ರೀ



ಸಿರವಾರ,ಆ.25-

ಹಿರಿಯ ವಿದ್ಯಾರ್ಥಿಗಳು ಕಿರಿಯರಲ್ಲಿರುವ ಆತಂಕವನ್ನು ದೂರ ಮಾಡಬೇಕು. ಶೈಕ್ಷಣಿಕ ಪ್ರಗತಿಗೆ ಪೂರಕವಾದ ವಿಚಾರಗಳನ್ನು ಚರ್ಚಿಸಿ, ಪರಸ್ಪರ ವಿಷಯ ವಿನಿಮಯ ಮಾಡಿಕೊಳ್ಳಬೇಕು ವಿದ್ಯಾರ್ಥಿಗಳು ತಮ್ಮ ಅಛಲ ನಿರ್ಧಾರ ದೊಂದಿಗೆ ಅಧ್ಯಯನ ಮಾಡಿದರೆ ಜೀವನದಲ್ಲಿ ಯಶಸ್ಸು ದೊರೆಯುವುದು ಎಂದು ನವಲಕಲ್ ಬೃಹನ್ಮಠದ ಷ.ಬ್ರ. ಅಭಿನವ ಸೋಮನಾಥ ಶಿವಾಚಾರ್ಯರು ಹೇಳಿದರು. ಪಟ್ಟಣದ ಶ್ರೀ ಸ್ವಾಮಿ ವಿವೇಕಾನಂದ ಪದವಿ ಪೂರ್ವ ಮತ್ತು ಪದವಿ

3 ನೇ ಪುಟಕ್ಕೆ

## ಅಗಸ್ಟ್ 28 ರಿಂದ ಐದು ದಿನಗಳ ಕಾಲ ಸಂಭ್ರಮದ ಶ್ರೀ ಹೈಯ್ಯಾಳಲಿಂಗೇಶ್ವರ ಜಾತ್ರೆ

ವಡಗೇರಾ,ಆ.25

ತಾಲೂಕಿನ ಹೈಯ್ಯಾಳ (ಬಿ)ಗ್ರಾಮದ ಸಗರನಾಡಿನ ಆರಾಧ್ಯದೈವ ಶ್ರೀ ಹೈಯ್ಯಾಳ ಲಿಂಗೇಶ್ವರ ಜಾತ್ರಾ ಮಹೋತ್ಸವ ಅಗಸ್ಟ್ 28 ರಿಂದ ಸೆಪ್ಟೆಂಬರ್ 1ರವರೆಗೆ ಅತ್ಯಂತ ವಿಜೃಂಭಣೆಯಿಂದ ಜರುಗಲಿದೆ ಎಂದು ದೇವಸ್ಥಾನ ಸಮಿತಿಯವರು ತಿಳಿಸಿದ್ದಾರೆ.ದಿ.28 ಶುಕ್ರವಾರ ದಂದು ಬೆಳಿಗ್ಗೆ 10.ಗಂಟೆಗೆ ಹೈಯ್ಯಾಳ ಲಿಂಗೇಶ್ವರ ಗದ್ದುಗೆಗೆ ಹೂ ಏರಿಸುವ ಕಾರ್ಯಕ್ರಮ ನೆರವೇರಲಿದೆ ಅಂದು ಸಾಯಂಕಾಲ 5.ಗಂಟೆಗೆ ಹೈಯ್ಯಾಳಲಿಂಗೇಶ್ವರರ ದೇವರ ಪಲ್ಲಕ್ಕಿಯು ಗ್ರಾಮದ ಸಮೀಪವಿರುವ ಕೃಷ್ಣಾ ನದಿಗೆ ಗಂಗಾಸ್ನಾನಕ್ಕೆ ತೆರಳಿ ಅಲ್ಲಿ







ಗಂಗಾಸ್ನಾನ ನೆರವೇರಿದ ನಂತರ ಇಡೀ ರಾತ್ರಿ ಕೃಷ್ಣಾ ನದಿ ತಟದಲ್ಲಿ ಡೊಳ್ಳಿನ ಪದ ಹಾಗೂ ಭಜನಾ ಕಾರ್ಯಕ್ರಮಗಳು ಜರುಗಲಿವೆ ದಿ: 29 ರಂದು ಶನಿವಾರ ಬೆಳಿಗ್ಗೆ 5:ಗಂಟೆಗೆ ದೇವರ ಪಲ್ಲಕ್ಕಿಯು ಗ್ರಾಮದ ಸಮೀಪದಲ್ಲಿರುವ ಆಳ ಮೇಲ್ ಹತ್ತಿರ ಬಂದು ಸಕ್ರೇಪ್ಪ ಪೂಜಾರಿ ಅವರಿಂದ ದೇವರ ಹೇಳಿಕೆ ಜರಗುತ್ತದೆ ತದನಂತರ ಡೊಳ್ಳು ಬಾಜಾ ಭಜಂತ್ರಿಗಳೊಂದಿಗೆ ಹೈಯ್ಯಾಳ ಲಿಂಗೇಶ್ವರ ಪಲ್ಲಕ್ಕಿಯು ಮೆರವಣಿಗೆಯೊಂದಿಗೆ ದೇವಸ್ಥಾನಕ್ಕೆ ತಲುಪಿ ದೇವಸ್ಥಾನದಲ್ಲಿ ಪಲ್ಲಕ್ಕಿಯು ಮೂರು ಸುತ್ತು ತಿರುಗಿ ಬೆಳಿಗ್ಗೆ 11ಗಂಟೆಗೆ ದೇವರುಗಳನ್ನು ಕರ್ತೃ ಗದ್ದುಗೆಗೆ ಮೇಲೆ ಕೂರಿಸಲಾಗುವುದು ಆ ನಂತರ 21 ದಿನಗಳ ಕಾಲ ದೇವರಿಗೆ ಒಂದೊತ್ತು ಇರುವ ಭಕ್ತರು ಅಂದು ವೃತವನ್ನು ಕೊನೆಗೊಳಿಸಿ ಹೋಳಿಗೆ ಕರ್ಜಕಾಯಿ ಇನ್ನಿತರ ಸಿಹಿ ಕ್ಯಾದ್ಯಗಳನ್ನು ತಯಾರಿಸಿ ಮಹಿಳೆಯರು ಬುಟ್ಟಿಯಲ್ಲಿ ತುಂಬಿಕೊಂಡು ತಲೆಯ ಮೇಲೆ ಹೊತ್ತು ತಂದು ದೇವರಿಗೆ ನೈವಿದ್ಯ ಅರ್ಪಿಸುವರು ಅಂದಿನ ದಿನ ಭಕ್ತರು ಜವಳ ದೀಡ ನಮಸ್ಕಾರ ಹರಕೆ ಸಲ್ಲಿಸುವರು.ಈ ಜಾತ್ರೆಯು ಐದು ದಿನಗಳ ಕಾಲ ಅತ್ಯಂತ ವಿಜೃಂಭಣೆಯಿಂದ ಜರಗುತ್ತದೆ ಸೆ.1ರಂದು ಗುಡಿ ತೊಳೆಯುವ ಪೂಜಾ ಕಾರ್ಯಕ್ರಮದೊಂದಿಗೆ ಈ ಜಾತ್ರೆಯು ಸಂಪನ್ನಗೊಳ್ಳಲಿದೆ ಈ ಜಾತ್ರೆಗೆ ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿ ಶ್ರೀ ಹೈಯ್ಯಾಳಲಿಂಗೇಶ್ವರ ಕೃಪೆಗೆ ಪಾತ್ರರಾಗುತ್ತಾರೆ ಪರಸ್ಥಳದಿಂದ ಬಂದಂತ ಭಕ್ತರಿಗೆ ಎಲ್ಲಾ ರೀತಿಯ ಸಕಲ ಸೌಲಭ್ಯಗಳನ್ನು ಒದಗಿಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಶ್ರೀ ಹೈಯ್ಯಾಳಲಿಂಗೇಶ್ವರ ದೇವಸ್ಥಾನ ಸಮಿತಿಯವರು ತಿಳಿಸಿದ್ದಾರೆ.

## ಕೊನೆಭಾಗಕ್ಕೆ ನೀರು ಹರಿಸುವಂತೆ ಒತ್ತಾಯಿಸಿ ರಸ್ತಾರೋಕ ,ಸಂಚಾರಕ್ಕೆ ತೊಂದರೆ







ಸಿರವಾರ,ಆ.25-

ತುಂಗಭದ್ರಾ ನೀರಾವರಿ ಸಲಹಾ ಸಮಿತಿಯ ತಿರ್ಮಾನದಂತೆ ಎಡದಂಡೆ ನಾಲೆಯ ಕೊನೆಭಾಗಕ್ಕೆ ನೀರು ತಲುಪದ ಹಿನ್ನೆಲೆಯಲ್ಲಿ ನೂರಾರು ರೈತರು ಪಕ್ಷಾತೀತವಾಗಿ ನೀರಾವರಿ ಇಲಾಖೆಯ ಮುಂದೇ ಹೊರಾಟ ಹಮ್ಮಿಕೊಂಡಿದರು. ಮುಂಜಾನೆಯಿಂದ ಬಾಷಣಕ್ಕೆ ಸಿಮಿತವಾಗಿದ ಹೋರಾಟ, ಮದ್ಯಾಹ್ನ ಊಟದ ನಂತರ ರಾಯಚೂರು ಲಿಂಗಸ್ಗೂರು ರಸ್ತೆ ಪ್ರತಿಭಟನಾಕಾರರು ತೆರಳಿ ರಸ್ತೆ ಬಂದ್ ಮಾಡುವ ಮೂಲಕ ಹೋರಾಟ ಮಾಡಿದ ಪರಿಣಾಮ ಸಂಚಾರಕ್ಕೆ ತೊಂದರೆಯಾಯಿತು.

ಪಟ್ಟಣದ ನೀರಾವರಿ ಇಲಾಖೆಯ ಆವರಣದಲ್ಲಿ ಬೆಳಗ್ಗೆಯೆ ಜಮಾವಣೆಗೊಂಡ ಹೋರಾಟದ ಕುರಿತು ಮಾಜಿ ಶಾಸಕರಾದ ರಾಜಾ ವೆಂಕಟಪ್ಪ ನಾಯಕ ಮಾತನಾಡಿ ನಾನು ಶಾಸಕರಾಗಿದ್ದ ಅವದಿಯಲ್ಲಿ ಜಲಾಶಯದಲ್ಲಿ ಕಡಿಮೆ ಸಂಗ್ರಹ ನೀರು ಇತ್ತು ಆದರೂ ಎರಡು ಬೆಳೆಗಳಿಗೆ ನೀರು ಹರಿಸಿ 10 ಬೆಳೆ ಬೆಳೆಯುವಂತೆ ಮಾಡಿದೆ, ಜನಪ್ರತಿನಿದಿಗಳು ತೊರಿಕೆಗಾಗಿ ಕಾಲುವೇ ಮೆಲೆ ಹೋಗದೆ, ನೀರು ತರಬೇಕು. ರೈತರ ಹೋರಾಕ್ಕೆ ನಾನು ಸದಾ ಸಿದ್ದ ಎಂದರು.

ಬಿಜೆಪಿ ಮಾಜಿ ಜಿಲ್ಲಾದ್ಯಕ್ಷ ಹಾಗೂ ರೈತ ಮುಖಂಡರಾದ ಜಿ.ಶರಣಪ್ಪಗೌಡ, ಜನಪ್ರತಿನಿಧಿಗಳ ನಿರ್ಲಕ್ಷ್ಯದಿಂದ ಜಿಲ್ಲೆಯ ರೈತರಿಗೆ ನೀರಾವರಿಯಿಂದ ವಂಚಿತರಾಗುತ್ತಿದ್ದೆವೆ. ಹಿಂದಿನ ತೀರ್ಮಾನದಂತೆ 75 % ನೀರನ್ನು ಜಿಲ್ಲೆಗೆ ಹರಸಬೇಕು, ಆದರೆ 75 % ನೀರು ಕೊಪ್ಪಳ ಜಿಲ್ಲೆಯವರು ಬಳಕೆ ಮಾಡುತ್ತಿದ್ದಾರೆ. ಸರ್ಕಾರವು ಕೊ.ಗಟ್ಟಲೇ ಅನುದಾನ ಲೂಟಿ ಹೊಡೆಯುತ್ತಿದ್ದಾರೆ. ನೀರಾವರಿ ಇಲ್ಲದವರು ನೀರು ಬಳಕೆ

3 ನೇ ಪುಟಕ್ಕೆ

## ದಲಿತರ ಕೊಲೆ ಖಂಡಿಸಿ ದಲಿತ ಸೇನೆ ಪ್ರತಿಭಟನೆ





ರಾಯಚೂರು,ಆ.25-

ಜಿಲ್ಲೆಯಲ್ಲಿ ನಡೆದ ಭೂಮಾನಂದ, ಅಶ್ವಿನಿ ಹಾಗೂ ರಾಣೆಮ್ಮ ಕೊಲೆ ಪ್ರಕರಣಗಳನ್ನು ಖಂಡಿಸಿ ಕರ್ನಾಟಕ ದಲಿತ ಸೇನೆ (ರಿ.) ರಾಯಚೂರು ಜಿಲ್ಲಾ ಘಟಕದ ವತಿಯಿಂದ ನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಯಿತು.

ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಅಶ್ವಿನಿ ಅತ್ಯಾಚಾರ ಕೊಲೆ ಪ್ರಕರಣ ಅತ್ಯಂತ ಅಮಾನವೀಯವಾಗಿದ್ದು, ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು. ಅಶ್ವಿನಿಗೆ ನ್ಯಾಯ ದೊರೆಯುವುದು ಎಂದರೆ ಆರೋಪಿಗಳಿಗೆ ಶಿಕ್ಷೆ ನೀಡುವುದಷ್ಟೇ ಅಲ್ಲ; ಮುಂದೆ ಇಂತಹ ಘಟನೆಗಳು ನಡೆಯದಂತೆ ಸುರಕ್ಷಿತ ಆಡಳಿತ ವ್ಯವಸ್ಥೆ ನಿರ್ಮಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಜಿಲ್ಲಾ ಅಧ್ಯಕ್ಷ ಮಾರುತಿ ಕಮ್ತೋಳ್ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛ ಭಾರತ ಮಿಷನ್ ಹಾಗೂ ಮನೆ-ಮನೆಗೆ ಶೌಚಾಲಯ ಯೋಜನೆಯಡಿ ಅರ್ಹ ಕುಟುಂಬಗಳಿಗೆ ವೈಯಕ್ತಿಕ ಹಾಗೂ ಸಮುದಾಯ ಶೌಚಾಲಯಗಳನ್ನು ನಿರ್ಮಿಸದಿರುವ ಬಗ್ಗೆ ಸಮಗ್ರ ತನಿಖೆ ನಡೆಸಬೇಕು. ಶೌಚಾಲಯಗಳ

3 ನೇ ಪುಟಕ್ಕೆ

# ಕೆಕೆಆರ್‌ಟಿಸಿ ಮೃತ ನೌಕರರ ಕುಟುಂಬಗಳಿಗೆ ತಲಾ 12.50 ಲಕ್ಷ ರೂ. ಪರಿಹಾರ ಧನ ವಿತರಣೆ



ಕಲಬುರಗಿ,ಆ.25-

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಅಕಾಲಿಕ ಮರಣ ಹೊಂದಿದ ಹಾಗೂ ಅಪಘಾತದಲ್ಲಿ ಮೃತಪಟ್ಟ ಚಾಲಕರು ಮತ್ತು ನೌಕರರ 18 ಕುಟುಂಬಗಳಿಗೆ ತಲಾ 12.50 ಲಕ್ಷರೂ. ಹಾಗೂ ಸುತ್ತೋಲೆ-2021ರ ಅನ್ವಯ ಎರಡು ಕುಟುಂಬಗಳಿಗೆ ತಲಾ 10 ಲಕ್ಷ ರೂ. ನಂತೆ ಒಟ್ಟು 2.45 ಕೋಟಿ ರೂ. ಪರಿಹಾರ ಧನ ವಿತರಿಸಲಾಗಿದೆ ಎಂದು ನಿಗಮದ ಅಧ್ಯಕ್ಷ ಅರುಣಕುಮಾರ್ ಎಂ.ವೈ. ಪಾಟೀಲ ತಿಳಿಸಿದರು.

ಸೋಮವಾರ ನಗರದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಚೇರಿ ಸಭಾಂಗಣದಲ್ಲಿ ಆಂತರಿಕ ಗುಂಪು ವಿಮಾ ಯೋಜನೆಯಡಿ ಮೃತ ನೌಕರರ ಕುಟುಂಬಗಳಿಗೆ ಪರಿಹಾರದ ಚೆಕ್‌ಗಳನ್ನು ಹಸ್ತಾಂತರಿಸಿ ಅವರು ಮಾತನಾಡಿದರು.

ಸಂಸ್ಥೆಯು ಕೇವಲ ಉದ್ಯೋಗ ನೀಡುವ ಸ್ಥಳವಲ್ಲ, ಅದೊಂದು ಕುಟುಂಬವಿದ್ದಂತೆ. ನೌಕರರ ಹಠಾತ್ ಅಗಲಿಕೆಯಿಂದ ಅವರ ಕುಟುಂಬಗಳು ಎದುರಿಸುವ ನೋವು ಸಂಸ್ಥೆಯದ್ದೂ ಆಗಿದೆ. ಮೃತ ನೌಕರರ ಕುಟುಂಬಸ್ಥರಿಗೆ ನಿಯಮಾನುಸಾರ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲು ಸಂಸ್ಥೆ ಸಂಪೂರ್ಣ ಬದ್ಧವಾಗಿದೆ ಎಂದು ಹೇಳಿದರು.

ಪರಿಹಾರವಾಗಿ ದೊರೆತ ಹಣವನ್ನು ಮಧ್ಯವರ್ತಿಗಳ ಮಾತಿಗೆ ಮರುಳಾಗದೆ ಸುರಕ್ಷಿತವಾಗಿ ಬ್ಯಾಂಕ್‌ನಲ್ಲಿ ಠೇವಣಿ ಇಟ್ಟು, ಮಕ್ಕಳ ಶಿಕ್ಷಣ ಹಾಗೂ ಕುಟುಂಬದ ಭವಿಷ್ಯಕ್ಕಾಗಿ ಬಳಸಿಕೊಳ್ಳುವಂತೆ ಕುಟುಂಬಸ್ಥರಿಗೆ ಸಲಹೆ ನೀಡಿದರು.

ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ ಮಾತನಾಡಿ, ಸೇವೆಯಲ್ಲಿದ್ದಾಗ ಸಿಬ್ಬಂದಿಯನ್ನು ಕಳೆದುಕೊಂಡಿರುವುದು ತೀವ್ರ ದುಃಖದ ಸಂಗತಿ. ಅವರ ಅಗಲಿಕೆಯಿಂದ ಉಂಟಾದ ಶೂನ್ಯವನ್ನು ತುಂಬಲು ಸಾಧ್ಯವಿಲ್ಲದಿದ್ದರೂ, ಕುಟುಂಬಗಳ ಭವಿಷ್ಯ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕೆ ಆರ್ಥಿಕ ನೆರವು ಒದಗಿಸುವ ಉದ್ದೇಶದಿಂದ ಆಂತರಿಕ ಗುಂಪು ವಿಮಾ ಯೋಜನೆಯಡಿ ಪರಿಹಾರ ನೀಡಲಾಗುತ್ತಿದೆ ಎಂದರು.

ಇತ್ತೀಚೆಗೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ನಿಗಮದ ಇಬ್ಬರು ಸಿಬ್ಬಂದಿ ಮೃತಪಟ್ಟಿದ್ದು, ಹಲವು ಪ್ರಯಾಣಿಕರು ಗಾಯಗೊಂಡಿದ್ದರು. ಘಟನೆ ನಡೆದ ತಕ್ಷಣ ನಿಗಮದ ಅಧ್ಯಕ್ಷರು ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳಿಗೆ ಸಾಂತ್ವನ ಹೇಳಿದ್ದರು. ಗಾಯಗೊಂಡ ಪ್ರಯಾಣಿಕರ ಸಂಪೂರ್ಣ ವೈದ್ಯಕೀಯ ಚಿಕಿತ್ಸಾ ವೆಚ್ಚವನ್ನು ನಿಗಮವೇ ಭರಿಸಿದೆ. ಸಂತ್ರಸ್ತ ಕುಟುಂಬಗಳಿಗೆ ನಿಗಮವು ಸದಾ ನೈತಿಕ ಹಾಗೂ ಆರ್ಥಿಕ ಬೆಂಬಲವಾಗಿ ನಿಲ್ಲಲಿದೆ ಎಂದು ತಿಳಿಸಿದರು.

ಮುಖ್ಯ ಕಾರ್ಮಿಕ ಕಲ್ಯಾಣ ಅಧಿಕಾರಿ ಸುನೀಲಕುಮಾರ್ ಚೇಂದ್ರಗಿ ಮಾತನಾಡಿ, ಸಂಸ್ಥೆಯು 2008ರಿಂದ ಆಂತರಿಕ ಗುಂಪು ವಿಮಾ ಯೋಜನೆಯನ್ನು ಜಾರಿಗೊಳಿಸಿದ್ದು, ಸಿಬ್ಬಂದಿಯ ಕ್ಷೇಮಾಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿದೆ. ಆರಂಭದಲ್ಲಿ ಸಣ್ಣ ಪ್ರಮಾಣದಲ್ಲಿ ಆರಂಭವಾದ ಯೋಜನೆ ಇದೀಗ 12.50 ಲಕ್ಷ ರೂ. ವರೆಗೆ ಪರಿಹಾರ ನೀಡುವ ಮಟ್ಟಕ್ಕೆ ವಿಸ್ತರಿಸಿದೆ ಎಂದರು.

ನಿಗಮದ ಆಡಳಿತ ಮಂಡಳಿಯು ಬ್ಯಾಂಕ್‌ಗಳ ಒಪ್ಪಂದದೊಂದಿಗೆ ಕರ್ತವ್ಯ ನಿರತ ಸಂದರ್ಭದಲ್ಲಿ ಅಥವಾ ವೈಯಕ್ತಿಕ ಅಪಘಾತದಲ್ಲಿ ಮೃತಪಟ್ಟ ಚಾಲಕರು ಹಾಗೂ ಸಿಬ್ಬಂದಿಯ ಕುಟುಂಬಗಳಿಗೆ 1 ಕೋಟಿ ರೂ. ಭದ್ರತಾ ವಿಮೆ ಒದಗಿಸುತ್ತಿದೆ. ಸಾಮಾನ್ಯ ಮರಣ ಹೊಂದಿದ ಸಿಬ್ಬಂದಿಯ ಕುಟುಂಬಗಳಿಗೆ 5 ರೂ. ನಿಂದ 6 ಲಕ್ಷ ರೂ. ವರೆಗೆ ಸಹಾಯಧನ ದೊರೆಯಲಿದೆ. ಪರಿಹಾರದ ಹಣವನ್ನು ಅನಗತ್ಯವಾಗಿ ಖರ್ಚು ಮಾಡದೆ ಮಕ್ಕಳ ಶಿಕ್ಷಣ ಹಾಗೂ ಕುಟುಂಬದ ಭವಿಷ್ಯಕ್ಕಾಗಿ ಬಳಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಕೆ.ಕೆ. ಆರ್.ಟಿ.ಸಿ ಮುಖ್ಯ ಸಂಚಾರ ವ್ಯವಸ್ಥಾಪಕ ಸಂತೋಷಕುಮಾರ, ಮುಖ್ಯ ಯಾಂತ್ರಿಕ ಇಂಜಿನಿಯರ ಸಂತೋಷಕುಮಾರ, ಮುಖ್ಯ ಲೆಕ್ಕಪತ್ರ ಅಧಿಕಾರಿ ಮತ್ತು ಹಣಕಾಸು ಸಲಹೆಗಾರ ಬಸವರಾಜ ಬೆಳಗಾವಿ, ಮುಖ್ಯ ಭದ್ರತೆ ಮತ್ತು ಜಾಗೃತಿ ಅಧಿಕಾರಿ ಬಸಪ್ಪ ಗುರಿಕಾರ, ಮುಖ್ಯ ಸಿಬ್ಬಂದಿ ಮತ್ತು ಸುರಕ್ಷತಾ ಅಧಿಕಾರಿ ಜಗದೀಶ, ಅನ್ವರ ಜಾವಿದ್, ಸಂಸ್ಥೆಯ ವಿವಿಧ ವಿಭಾಗಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ಡಾ.ಪಿ.ಎಸ್.ಶಂಕರ್ ಪ್ರತಿಷ್ಠಾನದ ಅಧ್ಯಕ್ಷರಾಗಿ ಡಾ.ಪಿ.ಎಂ.ಬಿರಾದಾರ್ ಆಯ್ಕೆ



ಕಲಬುರಗಿ,ಆ.25-

ಡಾ.ಪಿ.ಎಸ್.ಶಂಕರ್ ಪ್ರತಿಷ್ಠಾನದ ನೂತನ ಅಧ್ಯಕ್ಷರಾಗಿ ಖ್ಯಾತ ಚರ್ಮರೋಗ ತಜ್ಞ ಡಾ.ಪಿ.ಎಂ.ಬಿರಾದಾರ್ ಅವರನ್ನು ಪ್ರತಿಷ್ಠಾನದ ಸರ್ವ ಸದಸ್ಯರ ಸಭೆಯಲ್ಲಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ನಗರದ ಡಾ. ಬಿಎಸ್ ಶಂಕರ್ ಅವರ ಸ್ವಗೃಹ ದೀಪ್ತಿಯಲ್ಲಿ ಭಾನುವಾರ ನಡೆದ ಸಭೆಯಲ್ಲಿ ಈ ಆಯ್ಕೆ ಪ್ರಕ್ರಿಯೆ ನಡೆಯಿತು. ಡಾ. ಬಿಎಸ್ ಶಂಕರ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ, ಶ್ರೀಮತಿ ಅಂಬಿಕಾ ಶಂಕರ್ ಅವರ ಅಗಲಿಕೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಡಾ. ಪಿ.ಎಂ. ಬಿರಾದಾರ್ ಅವರನ್ನು ಆಯ್ಕೆ ಮಾಡಲಾಯಿತು.

ಈವರೆಗೆ ಪ್ರತಿಷ್ಠಾನದ ಕೋಶಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಡಾ.ಪಿ.ಎಂ.ಬಿರಾದಾರ್ ಅವರ ಸ್ಥಾನಕ್ಕೆ ಮಣಿಲಾಲ್ ಶಹಾ ಅವರನ್ನು ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ಮಾತನಾಡಿದ ಡಾ. ಬಿಎಸ್ ಶಂಕರ್ ಪ್ರತಿಷ್ಠಾನದ ಪ್ರಮುಖ ಕಾರ್ಯಕ್ರಮಗಳಾದ ವೈದ್ಯಶ್ರೀ ಪ್ರಶಸ್ತಿ, ವೈದ್ಯ ಸಾಹಿತ್ಯ ಪ್ರಶಸ್ತಿ, ವೈದ್ಯಕೀಯ ವಿದ್ಯಾರ್ಥಿ ಪುರಸ್ಕಾರ, ಯುಗಾದಿ ಚೈತ್ರೋತ್ಸ ವ, ಚಿಗುರು ಚಿನ್ಮಯ ಪ್ರಶಸ್ತಿ, ದತ್ತಿ ಉಪನ್ಯಾಸಗಳು ಹಾಗೂ ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮಗಳನ್ನು ಹಿಂದಿನಂತೆ ಮುಂದುವರಿಸಲಾಗುವುದು ಎಂದು ತಿಳಿಸಿದರು.

ಪ್ರತಿಷ್ಠಾನದ ಕಾರ್ಯದರ್ಶಿ ಪ್ರೊ.ನರೇಂದ್ರ ಬಡಶೇಷಿ ಆಯ್ಕೆ ಪ್ರಕ್ರಿಯೆ ನಡೆಸಿ ಕಾರ್ಯಕ್ರಮ ನಿರೂಪಿಸಿದರು.

ಸಭೆಯಲ್ಲಿ ಡಾ.ಪಿ ಎಂ ಬಿರಾದಾರ ಸಿವಿ ಮಣಿಲಾಲ್ ಶಹಾ, ದೀಪಕ್ ಪಾಟೀಲ್, ಡಾ. ರೂಪ ಹೆಬ್ಬಂಡಿ, ಡಾ ಸಿದ್ದರಾಮ ಪಾಟೀಲ್, ಡಾ. ಸದಾನಂದ ಪೆರ್ಲ, ಡಾ. ರಾಜೇಂದ್ರ ಕೊಂಡ ಡಾ. ಮಾಲಿ ಪಾಟೀಲ್, ಅನ್ನಪೂರ್ಣ ಇನಾಂದಾರ, ಸದಾನಂದ ಎಂ,ನ್ಯಾಯವಾದಿ ಉದಯ ಹೊನಗುಂಟಿಕರ್ ಶೇಖರ್ ಗಾದಾ, ನರೇಂದ್ರ ಬಡಶೇಷಿ ಮತ್ತಿತರರು ಉಪಸ್ಥಿತರಿದ್ದರು.

# ಧರ್ಮಸ್ಥಳ ಸಂಸ್ಥೆಯಿದ ಸಾವಳೇಶ್ವರ ಶಾಲೆಯಲ್ಲಿ ಸಸಿನೆಡುವ ಕಾರ್ಯಕ್ರಮ



ಆಳಂದ,ಆ.25-

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್ (ರಿ) ತಾಲೂಕು ಶಾಖೆಯ ವತಿಯಿಂದ ಸಾವಳೇಶ್ವರ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಸಾಮಾಜಿಕ ಅರಣ್ಯೀಕರಣ ಹಾಗೂ ಗಿಡನಾಟಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ತಾಲೂಕು ಯೋಜನಾಧಿಕಾರಿ ಓಂಕೇಶ್ ಮಾತನಾಡಿ, ಪರಿಸರ ರಕ್ಷಣೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಹೇಳಿದರು.

ಪ್ರಸ್ತುತ ಪರಿಸರ ಮಾಲಿನ್ಯ, ಅರಣ್ಯ ನಾಶ ಹಾಗೂ ಹವಾಮಾನ ವೈಪರೀತ್ಯಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ಪರಿಸರದ ಬಗ್ಗೆ ಕಾಳಜಿ ವಹಿಸಬೇಕು. ಮರಗಳು ಶುದ್ಧ ಗಾಳಿ, ಜೀವಜಲ ಹಾಗೂ ಮಳೆಯ ಸಮತೋಲನ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ಅರಣ್ಯ ನಾಶದಿಂದ ಪ್ರಕೃತಿ ವಿಕೋಪಗಳು ಹೆಚ್ಚಾಗುತ್ತಿದ್ದು, ಪರಿಸರ ಸಂರಕ್ಷಣೆಯಲ್ಲಿ ವಿದ್ಯಾರ್ಥಿಗಳು ಮುಂಚೂಣಿಗೆ ಬರಬೇಕು ಎಂದರು.

ಶಾಲಾ ಹಂತದಲ್ಲಿಯೇ ವಿದ್ಯಾರ್ಥಿಗಳಿಗೆ ಸಸಿ ನೆಡುವುದು ಹಾಗೂ ಅವುಗಳನ್ನು ಪೋಷಿಸುವ ಅಭ್ಯಾಸ ಬೆಳೆಸಿದರೆ ಪರಿಸರ ಸಂರಕ್ಷಣೆಯ ಮಹತ್ವವನ್ನು ಜೀವನದುದ್ದಕ್ಕೂ ಅಳವಡಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಜನಜಾಗೃತಿ ಸದಸ್ಯ ಅಪ್ಪಾಸಾಹೇಬ ತೀರ್ಥೆ ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ವಿವಿಧ ಕ್ಷೇತ್ರಗಳಲ್ಲಿ ಸಾಮಾಜಿಕ ಕಾರ್ಯಗಳನ್ನು ನಡೆಸುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ವಸತಿ ಶಾಲೆಯ ಪ್ರಾಂಶುಪಾಲ ಮಂಜುನಾಥ ಶೆಟ್ಟಿ ಮಾತನಾಡಿ, ಧರ್ಮಸ್ಥಳ ಯೋಜನೆಯ ಕಾರ್ಯಕ್ರಮಗಳು ಜನಹಿತಕ್ಕಾಗಿ ನಡೆಯುತ್ತಿದ್ದು, ಶಿಕ್ಷಣ ಇಲಾಖೆಗೆ ಸಂಸ್ಥೆ ಹಲವು ರೀತಿಯಲ್ಲಿ ಸಹಕಾರ ನೀಡುತ್ತಿದೆ. ಶಾಲೆಗೆ ನೀಡಿರುವ ಹಣ್ಣಿನ ಗಿಡಗಳನ್ನು ಮಕ್ಕಳೊಂದಿಗೆ ಸೇರಿ ಕಾಳಜಿಯಿಂದ ಬೆಳೆಸುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಗ್ರಾ.ಪಂ ಮಾಜಿ ಉಪಾಧ್ಯಕ್ಷ ಶಿವಲಿಂಗಪ್ಪ, ಮುಖಂಡ ಸುಭಾಷ್ ಗ್ರಾಮದ, ಸಂಸ್ಥೆಯ ಕೃಷಿ ಮೇಲ್ವಿಚಾರಕ ಸಂತೋಷ ರಡ್ಡಿ, ವಲಯ ಮೇಲ್ವಿಚಾರಕ ವಿರೇಶ್ ಕೋಣೆ, ಸೇವಾ ಪ್ರತಿನಿಧಿ ಅವ್ವಮ್ಮ, ಶಾಲೆಯ ಸಿಬ್ಬಂದಿ ವರ್ಗದವರು ಮತ್ತು ಮುದ್ದು ಮಕ್ಕಳು ಉಪಸ್ಥಿತರಿದ್ದರು.

# ಕಲಬುರಗಿ ಜಿಲ್ಲೆಯಲ್ಲಿ 18.49 ಲಕ್ಷ ಮತದಾರರ ಕರಡು ಪಟ್ಟಿ ಪ್ರಕಟ; ಸೆ.23ರವರೆಗೆ ಹಕ್ಕು-ಆಕ್ಷೇಪಣೆಗೆ ಅವಕಾಶ



ಕಲಬುರಗಿ,ಆ.25-

ವಿಶೇಷ ಸಂಕ್ಷಿಪ್ತ ಪರಿಷ್ಕರಣೆ -2026ರ ಅಂಗವಾಗಿ ಕಲಬುರಗಿ ಜಿಲ್ಲೆಯಲ್ಲಿ ಕರಡು ಮತದಾರರ ಪಟ್ಟಿಯನ್ನು ಸೋಮವಾರ ಪ್ರಕಟಿಸಲಾಗಿದ್ದು, ಜಿಲ್ಲೆಯ ಒಂಬತ್ತು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 18,49,585 ಮತದಾರರು ಪಟ್ಟಿಯಲ್ಲಿ ದಾಖಲಾಗಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಸೋಮವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಕರಡು ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆ.24ರಿಂದ ಸೆ.23ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶವಿದೆ. ಈ ಅವಧಿಯಲ್ಲಿ ಅರ್ಹ ಮತದಾರರು ತಮ್ಮ ಹೆಸರು, ವಿಳಾಸ, ವಯಸ್ಸು , ಮತಗಟ್ಟೆ ಸೇರಿದಂತೆ ಮತದಾರರ ಪಟ್ಟಿಯಲ್ಲಿರುವ ವಿವರಗಳನ್ನು ಪರಿಶೀಲಿಸಬೇಕು. ಹೆಸರು ಸೇರ್ಪಡೆಯಾಗದಿದ್ದರೆ ಅಥವಾ ಯಾವುದೇ ತಿದ್ದುಪಡಿ ಅಗತ್ಯವಿದ್ದರೆ ಸಂಬಂಧಪಟ್ಟ ಚುನಾವಣಾಧಿಕಾರಿಗಳಿಗೆ ಅರ್ಜಿ ಸಲ್ಲಿಸಬಹುದು ಎಂದರು.

ಕರಡು ಪಟ್ಟಿಯಲ್ಲಿ 9,40,251 ಪುರುಷರು, 9,09,121 ಮಹಿಳೆಯರು ಹಾಗೂ 213 ತೃತೀಯ ಲಿಂಗದ ಮತದಾರರು ಇದ್ದಾರೆ. ಕಲಬುರಗಿ ಉತ್ತರ ಕ್ಷೇತ್ರದಲ್ಲಿ ಗರಿಷ್ಠ 2,29,997 ಮತದಾರರಿದ್ದು, ಕಲಬುರಗಿ ಗ್ರಾಮೀಣದಲ್ಲಿ 2,21,513, ಜೇವರ್ಗಿಯಲ್ಲಿ 2,15,846, ಆಳಂದದಲ್ಲಿ 2,05,852 ಹಾಗೂ ಅಫಜಲಪುರದಲ್ಲಿ 2,04,401 ಮತದಾರರಿದ್ದಾರೆ.

5.21 ಲಕ್ಷ ಮತದಾರರು ಪಟ್ಟಿಯಲ್ಲಿ : ಪ್ರಕ್ರಿಯೆಯಲ್ಲಿ ಜಿಲ್ಲೆಯಾದ್ಯಂತ ಒಟ್ಟು 5,21,957 ಮತದಾರರನ್ನು (ಗೈರು, ಸ್ಥಳಾಂತರಗೊಂಡ, ಮೃತ, ನಕಲಿ/ಈಗಾಗಲೇ ನೋಂದಣಿಯಾಗಿರುವ ಹಾಗೂ ಇತರೆ) ವರ್ಗದಲ್ಲಿ ಗುರುತಿಸಲಾಗಿದೆ. ಇದು ಒಟ್ಟು ಮತದಾರರ ಪೈಕಿ ಶೇ.22.01ರಷ್ಟಾಗಿದೆ.

ಕಲಬುರಗಿ ಉತ್ತರ ಕ್ಷೇತ್ರದಲ್ಲಿ 1,05,257 ಹಾಗೂ ಕಲಬುರಗಿ ದಕ್ಷಿಣದಲ್ಲಿ 1,01,263 ಮತದಾರರು ಪಟ್ಟಿಯಲ್ಲಿದ್ದಾರೆ. ಚಿತ್ತಾಪುರದಲ್ಲಿ 55,500, ಕಲಬುರಗಿ ಗ್ರಾಮೀಣದಲ್ಲಿ 53,365, ಆಳಂದದಲ್ಲಿ 49,214, ಜೇವರ್ಗಿಯಲ್ಲಿ 43,215, ಸೇಡಂನಲ್ಲಿ 41,491, ಅಫಜಲಪುರದಲ್ಲಿ 38,925 ಹಾಗೂ ಚಿಂಚೋಳಿಯಲ್ಲಿ 33,727 ಮತದಾರರನ್ನು ಈ ವರ್ಗದಲ್ಲಿ ಗುರುತಿಸಲಾಗಿದೆ.

ಪಟ್ಟಿಯಲ್ಲಿ 3,47,606 ಮಂದಿ ಗೈರು, 71,691 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡವರು, 33,399 ಮಂದಿ ಮೃತರು ಹಾಗೂ 21,816 ಮಂದಿ ಈಗಾಗಲೇ ನೋಂದಣಿಯಾಗಿರುವ ಅಥವಾ ನಕಲಿ ನೋಂದಣಿ ಸೇರಿದಂತೆ ಇತರೆ ವರ್ಗಗಳಲ್ಲಿ ಗುರುತಿಸಲಾಗಿದೆ. 1.05 ಲಕ್ಷ ಮ್ಯಾಪಿಂಗ್, ಅಸಂಗತತೆ ಪ್ರಕರಣ : ಕರಡು ಪಟ್ಟಿಯಲ್ಲಿ ಒಟ್ಟು 1,05,493 ಮ್ಯಾಪಿಂಗ್ ಇಲ್ಲದ ಅಥವಾ ಅಸಂಗತತೆ ಇರುವ ಪ್ರಕರಣಗಳು ಪತ್ತೆಯಾಗಿವೆ. ಇದರಲ್ಲಿ 53,788 ಪ್ರಕರಣಗಳಲ್ಲಿ ಮ್ಯಾಪಿಂಗ್ ಇಲ್ಲದಿರುವುದು ಹಾಗೂ 51,705 ಪ್ರಕರಣಗಳಲ್ಲಿ ಅಸಂಗತತೆ ಕಂಡುಬಂದಿದೆ. ಕಲಬುರಗಿ ದಕ್ಷಿಣದಲ್ಲಿ 31,081 ಹಾಗೂ ಕಲಬುರಗಿ ಉತ್ತರದಲ್ಲಿ 25,866 ಪ್ರಕರಣಗಳು ದಾಖಲಾಗಿವೆ.

ಅ.27ರಂದು ಅಂತಿಮ ಮತದಾರರ ಪಟ್ಟಿ : ಪರಿಷ್ಕರಣೆಯ ವೇಳಾಪಟ್ಟಿಯಂತೆ ಆ.24ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದೆ. ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಸೆ.23ರವರೆಗೆ ಅವಕಾಶವಿದ್ದು, ನೋಟಿಸ್ ಹಂತ ಹಾಗೂ ಹಕ್ಕು-ಆಕ್ಷೇಪಣೆಗಳ ವಿಲೇವಾರಿ ಅ.22ರವರೆಗೆ ನಡೆಯಲಿದೆ. ಅಂತಿಮ ಮತದಾರರ ಪಟ್ಟಿ ಅ.27, 2026ರಂದು ಪ್ರಕಟವಾಗಲಿದೆ.

ನೋಟಿಸ್ ನೀಡುವ ಸಂದರ್ಭದಲ್ಲಿ ಕಾರಣ, ಅಗತ್ಯ ದಾಖಲೆಗಳು, ವಿಚಾರಣೆಯ ದಿನಾಂಕ, ಸ್ಥಳ ಹಾಗೂ ಸಮಯವನ್ನು ನಮೂದಿಸಲಾಗಿರುತ್ತದೆ. ಬಿಎಲ್‌ಒಗಳು ನೋಟಿಸ್ ಅನ್ನು ಮತದಾರರ ಮನೆಗೆ ತೆರಳಿ ನೀಡಲಿದ್ದಾರೆ. ಮತದಾರರು ಮನೆಯಲ್ಲಿ ಲಭ್ಯವಿಲ್ಲದಿದ್ದರೆ ಅವರು ಸೂಚಿಸುವ ವ್ಯಕ್ತಿಗೆ ನೋಟಿಸ್ ಹಸ್ತಾಂತರಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ನೋಟಿಸ್ ನೀಡಿದ ಬಳಿಕ ಮತದಾರರಿಗೆ ಕನಿಷ್ಠ ಏಳು ದಿನಗಳ ಕಾಲಾವಕಾಶ ನೀಡಲಾಗುತ್ತದೆ. ನಿಗದಿತ ದಿನಾಂಕದಂದು ಹಾಜರಾಗಲು ಸಾಧ್ಯವಾಗದಿದ್ದರೆ ಒಮ್ಮೆ ಮಾತ್ರ ಕಾಲಾವಕಾಶ ಪಡೆಯಲು ಅವಕಾಶ ಇದೆ. ಸಂಬಂಧಪಟ್ಟ ಮತದಾರರು ಅಗತ್ಯ ದಾಖಲೆಗಳೊಂದಿಗೆ ಚುನಾವಣಾಧಿಕಾರಿ ಮುಂದೆ ಖುದ್ದು ಹಾಜರಾಗಬೇಕು ಎಂದು ಅವರು ಹೇಳಿದರು.

# ಸಂಗೊಳ್ಳಿ ರಾಯಣ್ಣರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸಬಾರದು: ಬಂಡೆಪ್ಪ ಕಾಶೆಂಪುರ್




ಬೀದರ್,ಆ.25-

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸಬಾರದು. ಅವರು ಪರಾಕ್ರಮಿ ಹಾಗೂ ದೇಶಭಕ್ತರಾಗಿದ್ದು, ಇಡೀ ದೇಶದ ಆಸ್ತಿಯಾಗಿದ್ದಾರೆ ಎಂದು ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ್ ಹೇಳಿದರು.

ನಗರದ ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಗೊಂಡ ಪರ ಸಂಘಟನೆಗಳ ಒಕ್ಕೂಟದ ವತಿಯಿಂದ ಸ್ವಾತಂತ್ರ್ಯೋತ್ಸವ ಹಾಗೂ ಸಂಗೊಳ್ಳಿ ರಾಯಣ್ಣ ಜಯಂತಿ ನಿಮಿತ್ತ ಇತ್ತೀಚೆಗೆ ಆಯೋಜಿಸಿದ್ದ ಯುವ ಜಾಗೃತಿ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಮೃತರಾವ್ ಚಿಮಕೋಡೆ ಮಾತನಾಡಿ, ಸಂಗೊಳ್ಳಿ ರಾಯಣ್ಣ ಅವರು ಬ್ರಿಟಿಷರ ವಿರುದ್ಧ ಹೋರಾಡಿದ್ದರು. ಇಂದಿನ ಯುವಕರು ಮಾದಕ ವಸ್ತುಗಳ ವಿರುದ್ಧ ಹೋರಾಟ ನಡೆಸಬೇಕು. ರಾಯಣ್ಣ ಅವರ ತತ್ವ, ಆದರ್ಶಗಳನ್ನು ಯುವಕರು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಗೊಂಡ ಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ತುಕಾರಾಮ್ ಚಿಮಕೋಡೆ ಮಾತನಾಡಿ, ಒಕ್ಕೂಟವು ಕಳೆದ ಆರು ವರ್ಷಗಳಿಂದ ಗೊಂಡ ಸಮಾಜದ ಹಿತ ರಕ್ಷಣೆಗೆ ಶ್ರಮಿಸುತ್ತಿದೆ. ಸಮಾಜಕ್ಕೆ ಅನ್ಯಾಯವಾದಾಗ ಪ್ರತಿಭಟನೆ ನಡೆಸಿದ್ದು, ಉತ್ತಮ ಕಾರ್ಯಗಳಿಗೆ ಬೆಂಬಲ ನೀಡುತ್ತಾ ಬಂದಿದೆ. ಯುವಕರೇ ದೇಶದ ಸಂಪತ್ತಾಗಿರುವ ಹಿನ್ನೆಲೆಯಲ್ಲಿ ಅವರಿಗೆ ಸರಿಯಾದ ಮಾರ್ಗದರ್ಶನ ನೀಡುವ ಉದ್ದೇಶದಿಂದ ಯುವ ಜಾಗೃತಿ ಸಮಾವೇಶ ಆಯೋಜಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಮಾಜಿ ಸಭಾಪತಿ ರಘುನಾಥರಾವ್ ಮಲ್ಕಾಪುರೆ ಮಾತನಾಡಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಔರಾದ್ ತಾಲೂಕು ಘಟಕದ ಅಧ್ಯಕ್ಷ ಬಾಲಾಜಿ ಅಮರವಾಡಿ, ಸಾಹಿತಿ ಬಾಲಾಜಿ ಕುಂಬಾರ್ ಹಾಗೂ ಟೀಮ್ ಯುವಾದ ವಿನಯ್ ಮಾಳಗೆ ಸಂವಾದ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಬಾಬುರಾವ್ ಮಲ್ಕಾಪುರ್ ಬಸವರಾಜ್ ಮಾಳಗೆ, ಮಲ್ಲಿಕಾರ್ಜುನ ಬಿರಾದಾರ್ ಶಕುಂತಲಾ ಬೆಲ್ದಾಳೆ, ಆನಂದ್ ಕಾಶೆಂಪುರ್ ಎಂ.ಎಸ್. ಕಟಗಿ, ಬಾಬುರಾವ್ ಲದ್ದೆ, ಭೀಮಸಿಂಗ್, ಇಂದುಮತಿ ಚಿದ್ರಿ, ಅನಿಲಕುಮಾರ್ ಬೆಲ್ದಾರ್ ಪ್ರದೀಪ್ ಜಂಜೀರೆ, ದೇವೇಂದ್ರ ಸೋನಿ, ಪಂಡಿತ್ ಚಿಮಕೋಡ್, ರಾಮು ಚಾಂದೋರಿ, ಸಂಗಪ್ಪ ಚಿದ್ರಿ, ಕುಶಾಲ್ ಹಾಸಗೊಂಡ್, ಪಂಡಿತ ಹಾವಗೊಂಡ ಹಾಗೂ ಗುಂಡಪ್ಪ ಚಾಂಬೋಳ್ ಸೇರಿದಂತೆ ಅನೇಕರು ಇದ್ದರು. ನಾಗೇಶ್ ಜಾನಕನೋರ್ ನಿರೂಪಿಸಿದರು. ಮಾಣಿಕಪ್ಪ ಬರಿದಾಬಾದ್ ಸ್ವಾಗತಿಸಿದರು. ಸಿದ್ದು ವಂದಿಸಿದರು.

# ಬೀದಿ ವ್ಯಾಪಾರಿಗಳ ಶುಲ್ಕ ಹೆಚ್ಚಳ ಖಂಡಿಸಿ ಬಿಜೆಪಿ ಪ್ರತಿಭಟನೆ




ಬೀದರ್,ಆ.25-

ಬೀದಿ ವ್ಯಾಪಾರಿಗಳಿಂದ ನಗರ ಪಾಲಿಕೆ ವಸೂಲಿ ಮಾಡುತ್ತಿದ್ದ ಶುಲ್ಕವನ್ನು 20 ರೂ. ನಿಂದ 60 ರೂ. ಗೆ ಏರಿಸಿರುವುದನ್ನು ವಿರೋಧಿಸಿ ಭಾರತೀಯ ಜನತಾ ಪಕ್ಷದ ವತಿಯಿಂದ ಸೋಮವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಗಣೇಶ್ ಮೈದಾನದಿಂದ ಮಹಾನಗರ ಪಾಲಿಕೆ ಕಚೇರಿವರೆಗೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನಾ ಮೆರವಣಿಗೆ ನಡೆಸಿ, ಶುಲ್ಕ ಹೆಚ್ಚಳವನ್ನು ಕೂಡಲೇ ಹಿಂಪಡೆಯುವಂತೆ ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್, ಬಡ ಬೀದಿ ವ್ಯಾಪಾರಿಗಳಿಂದ ದಿನಕ್ಕೆ 60 ರೂ. ಶುಲ್ಕ ವಸೂಲಿ ಮಾಡುವುದು ಅನ್ಯಾಯವಾಗಿದೆ ಎಂದು ಹೇಳಿದರು. ಶುಲ್ಕ ವಸೂಲಿ ಮಾಡುವ ಅಧಿಕಾರ ಯಾರಿಗೆ ನೀಡಲಾಗಿದೆ, ಟೆಂಡರ್ ಪ್ರಕ್ರಿಯೆ ಹೇಗೆ ನಡೆದಿದೆ, ಎಷ್ಟು ಮೊತ್ತಕ್ಕೆ ಟೆಂಡರ್ ನೀಡಲಾಗಿದೆ ಹಾಗೂ ವ್ಯಾಪಾರಿಗಳಿಂದ ಎಷ್ಟು ಹಣ ವಸೂಲಿ ಮಾಡಲಾಗುತ್ತಿದೆ ಎಂಬುದನ್ನು ನಗರ ಪಾಲಿಕೆ ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಷ್ಟಪಡಿಸಬೇಕು ಎಂದು ಒತ್ತಾಯಿಸಿದರು.

ಕೇವಲ ಸಚಿವರೊಬ್ಬರನ್ನೇ ಈ ವಿಚಾರದಲ್ಲಿ ಹೊಣೆಗಾರರನ್ನಾಗಿ ಮಾಡುವುದು ಸರಿಯಲ್ಲ. ನಗರ ಪಾಲಿಕೆ ಅಧಿಕಾರಿಗಳಿಗೂ ಸಮಾನ ಜವಾಬ್ದಾರಿ ಇದೆ ಎಂದು ಅವರು ಆರೋಪಿಸಿದರು.

ಶುಲ್ಕ ವಸೂಲಿ ವ್ಯವಸ್ಥೆಯಲ್ಲಿ ಸಂಪೂರ್ಣ ಪಾರದರ್ಶಕತೆ ಇರಬೇಕು. ನಕಲಿ ರಸೀದಿ ಮೂಲಕ ಹಣ ವಸೂಲಿ ಮಾಡಲಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು. ವ್ಯಾಪಾರಿಗಳಿಂದ ಹಣ ಪಡೆಯುವಾಗ ಅಧಿಕೃತ ರಸೀದಿ ನೀಡುವುದರ ಜೊತೆಗೆ, ಸಾಧ್ಯವಾದರೆ ಕ್ಯೂಆರ್ ಕೋಡ್ ಮೂಲಕ ಡಿಜಿಟಲ್ ಪಾವತಿ ವ್ಯವಸ್ಥೆ ಜಾರಿಗೆ ತರಬೇಕು ಎಂದು ಆಗ್ರಹಿಸಿದರು.

ನಗರದ ವಾಕಿಂಗ್ ಸ್ಟ್ರೀಟ್ ಸೇರಿದಂತೆ ವಿವಿಧ ವ್ಯಾಪಾರ ಪ್ರದೇಶಗಳಲ್ಲಿ ಬೀದಿ ವ್ಯಾಪಾರಿಗಳಿಗೆ ಸೂಕ್ತ ಸ್ಥಳಾವಕಾಶ ಕಲ್ಪಿಸಬೇಕು. ವಾಹನ ಸಂಚಾರ ಮತ್ತು ವ್ಯಾಪಾರ ವ್ಯವಸ್ಥೆಯನ್ನು ಸಮರ್ಪಕವಾಗಿ ನಿರ್ವಹಿಸಿ, ವ್ಯಾಪಾರಿಗಳ ಜೀವನೋಪಾಯಕ್ಕೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಬಡ ಬೀದಿ ವ್ಯಾಪಾರಿಗಳ ಮೇಲೆ ಹೆಚ್ಚುವರಿ ಶುಲ್ಕದ ಹೊರೆ ಹಾಕಬಾರದು. 60 ರೂ. ಶುಲ್ಕ ವಸೂಲಿ ಮಾಡುವ ಕ್ರಮವನ್ನು ಕೂಡಲೇ ಹಿಂಪಡೆಯಬೇಕು ಎಂದು ಆಗ್ರಹಿಸಿ ಬಳಿಕ ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ನಗರ ಘಟಕದ ಅಧ್ಯಕ್ಷ ಶಶಿ ಹೊಸಳ್ಳಿ, ಬಾಬು ವಾಲಿ, ಈಶ್ವರ್‌ಸಿಂಗ್ ಠಾಕೂರ್ ಸುಭಾಷ್ ಮಡಿವಾಳ್, ಗಣೇಶ್ ಭೋಸ್ಲೆ, ಬಾಬು ಮಲ್ಕಾಪೂರೆ, ರೋಷನ್ ವರ್ಮಾ, ಪೀರಪ್ಪ ಔರಾದೆ, ಶ್ರೀನಿವಾಸ್ ಚೌದ್ರಿ, ರಾಜಶೇಖರ್ ನಾಗಮೂರ್ತಿ, ಹನಮಂತ್ ಬುಳ್ಳಾ, ದೀಪಕ್ ಗಾದಗೆ, ನರೇಶ್ ಗೌಳಿ, ಅಶೋಕ್ ಕರಂಜಿ, ನವೀನ್ ಚಿಟ್ಟಾ, ಗೋರಖನಾಥ್ ಗೌಳಿ, ನಿಲೇಶ್ ರಕ್ಷಾಳ್, ಮಲ್ಲಿಕಾರ್ಜುನ್ ನಂದಗಾಂವಕರ್ ಸಂಗಮೇಶ್, ಅಂಬರೀಷ್ ಕಾಮತಾಣೆ, ಆತ್ಮರಾಮ್, ಬಸವ ಮುಲಗೆ, ವಿರೇಶ್ ಸ್ವಾಮಿ, ನಿರಂಜನ್, ಶಶಿಕಾಂತ್ ಹಾಗೂ ಜಗದೀಶ್ ಸೇರಿದಂತೆ ಬಿಜೆಪಿ ಕಾರ್ಯಕರ್ತರು, ಬೀದಿಬದಿ ವ್ಯಾಪಾರಿಗಳು ಉಪಸ್ಥಿತರಿದ್ದರು.

## ಒಂದನೇಯ ಪುಟದಿಂದ

## ಕೊನೆಭಾಗಕ್ಕೆ ನೀರು ಹರಿಸುವಂತೆ ಒತ್ತಾಯಿಸಿ ಪಕ್ಷಾತೀತ ಹೋರಾಟ

ಮಾಡುತ್ತಿದ್ದಾರೆ. ನೀರಾವರಿ ಪ್ರದೇಶಕ್ಕೆ ನೀರು ವಂಚಿತರಾಗುತ್ತಿದ್ದೆವೆ. ಕಲ್ಬುರ್ಗಾ ರೀಜಿನಲ ಅದಿಕಾರಿ ಕೊನೆಭಾಗಕ್ಕೆ ನೀರು ತಲುಪಿಸಲು ಎರಡು ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ, ಎಸ್ ಪಿಯವರಿಗೆ ಸೂಚಿಸಬೇಕು, ಮಾಜಿ ಶಾಸಕ ಗಂಗಾಧರ ನಾಯಕ ಮಾತನಾಡಿ ನೀರಾವರಿ ಇಲಾಖೆಯ ಅಧಿಕಾರಿಗಳು ನಾಲೆಯ ಮೇಲೆ ಓಡಾಡುತ್ತಿಲ. ಮುಖ್ಯವಾಗಿ ಜನಪ್ರತಿನಿಧಿಗಳು ನೀರು ತಲುಪಿಸುವಲಿ ವಿಫಲರಾಗಿದ್ದಾರೆ. ಜಿಲ್ಲೆಯ ಎಲ್ಲಾ ಶಾಸಕರು, ಸಂಸದರು ಅಧಿವೇಶನದಲ್ಲಿ ಮಾತನಾಡುತ್ತಿಲ. ಈ ವಿಷಯದ ಕುರಿತು ಮಾತನಾಡಬೇಕು ಅಂದಾಗ ನೀರು ಬರುತ್ತದೆ. ಪ್ರತಿ ವರ್ಷ ನೀರಿಗಾಗಿ ಹೋರಾಟ ಮಾಡಿ ನೀರು ಪಡೆಯುವಂತಾಗಿದೆ. ನಮ್ಮ ಭಾಗಕ್ಕೆ ಹಂಚಿಕೆಯಾಗುವ ನೀರು ನೀಡಬೇಕು ಎಂದರು.

ರೈತ ಸಂಘದ ಗೌರವ ಅದ್ಯಕ್ಷ ಚಾಮರಸ ಮಾಲಿಪಾಟೀಲ್ ಮಾತನಾಡಿ ರಾಜ್ಯದಲ್ಲಿ 178 ತಾಲೂಕ ಬರಗಾಲ ಇವೆ , ರಾಯಚೂರು ಜಿಲ್ಲೆ ಎಲ್ಲಾ ತಲೂಕ ಬರಪಿಡಿತರಾಗಿದ್ದೂ, ಯಾವುದೇ ಕ್ರಮಕೈಗೊಳುವಲಿ ಸರ್ಕಾರ ವಿಫಲವಾಗಿದೆ. ಅ11 ಸಲಹ ಸಮಿತಿ ಸಭೆ ಕರೆಯಲಾಗಿತು. ತಕ್ಷಣ ನೀರು ಹರಿಸಿ ಕೊನೆಯ ಭಾಗಕ್ಕೆ ಸಮರ್ಪಕವಾಗಿ ನೀರು ತಲುಪಿದ ನಂತ ಮೇಲ್ಬಾಗದಲ್ಲಿ ಗೇಟ್ ಎತ್ತಬಹುದು. 104 ರಲ್ಲಿ 5 ಪೀಟ್ ನೀರು ಇರಬೇಕು, 1 ಲಕ್ಷ 75 ಸಾವಿರ ಎಕರೆಗೆ ಬಳಸುವ ನೀರನ್ನು ಮೇಲ್ಬಾಗದಲ್ಲಿ ಬಳಕೆಯಾಗುತ್ತಿದೆ. ಮಳೆ ಇಲಾ, ನಾಲೆಗೆ ನೀರು ಇಲ್ಲದೆ ಜನರು ಗುಳೆ ಹೋಗುತ್ತಿದ್ದಾರೆ. ಕೊಪ್ಪಳ ಜಿಲ್ಲೆಯಲ್ಲಿ, ನೀರು ಬಳಕೆ ಕಡಿಮೆಯಾಗಬೇಕು. ಈ. ಮಾಜಿ ಶಾಸಕರಾದ ಬಸವನಗೌಡ ಬ್ಯಾಗವ್ಯಾಟ್,ಹರವಿ ಶಂಕರಗೌಡ, ಜಿ.ಲೋಕರೆಡ್ಡಿ, ಜೆ. ದೇವರಾಜ ಗೌಡ, ಎಂ. ನಾಗರಾಜ ಗೌಡ, ಸಿದ್ದರಾಮಯ್ಯಸ್ವಾಮಿ,ಆದರ್ಶನಾಯಕ, ಕಾಶಿನಾಥ ಸರೋದೆ, ಈಶಪ್ಪ ಹೂಗಾರ,ಸೂಗುರಯ್ಯ ಸ್ವಾಮಿ. ಲಿಂಗಾರೆಡ್ಡಿ ಪಾಟೀಲ್. ಎಂ. ಉದಯಕುಮಾರ್ ಚಾಗಭಾವಿ,ಚನ್ನೂರ ಚನ್ನಪ್ಪ, ಕಲ್ಲೂರಿ ಬಸವರಾಜ ನಾಯಕ, ಅಮರೇಶ ಗೌಡ ಪನ್ನೂರು, ಡಾ. ನಾಗರಾಜ ಪಾಟೀಲ, ವಿಜಯ ಕುಮಾರ ಗುಡ್ಡದಮನಿ, ಎಂ ಪ್ರಕಾಶಪ್ಪ, ಬಡ್ಡ ಹನುಮಂತ,ಸೇರಿದಂತೆ ಸುತ್ತಮುತ್ತಲಿನ ಹಳ್ಳಿಗಳ ನೂರಾರು ರೈತರು ಭಾಗವಹಿಸಿದರು.

ತಹಸೀಲ್ದಾರ ಅಶೋಕಪವಾರ, ಡಿವೈಎಸ್ ಪಿ ಚಂದ್ರಶೇಖರ ನಾಯಕ ನೇತೃತ್ವದಲ್ಲಿ ಸಿಪಿಐ ಶಶಿಕಾಂತ ಎಂ ಸೂಕ್ತ ಬಂದೋಬಸ್ತ್ ಒದಗಿಸಲಾಗಿತು.

## ಗುರುಸಾರ್ವಭೌಮರ 355ನೇ ಆರಾಧನಾ ಮಹೋತ್ಸವ

ದೂರದೂರುಗಳಿಂದ ಆಗಮಿಸುವ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಕುಡಿಯುವ ನೀರು, ಬಟ್ಟೆ ಬದಲಾಯಿಸುವ ಕೊಠಡಿಗಳು, ತಾತ್ಕಾಲಿಕ ಶೌಚಾಲಯಗಳು, ವೈದ್ಯಕೀಯ ಸೇವೆ, ಭದ್ರತೆ, ಪಾರ್ಕಿಂಗ್, ನೈರ್ಮಲ್ಯ, ಪ್ರಸಾದ ವಿತರಣೆ ಹಾಗೂ ಸ್ವಯಂಸೇವಕರ ಸೇವೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಹೆಚ್ಚುವರಿ ಸೇವಾ ಬುಕಿಂಗ್ ಮತ್ತು ಪರಿಮಳ ಪ್ರಸಾದ ವಿತರಣಾ ಕೌಂಟರ್‌ಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗಿದೆ ಎಂದು ಶ್ರೀಗಳು ತಿಳಿಸಿದರು. ಭಕ್ತರು ಹಾಗೂ ದಾನಿಗಳ ಸಹಕಾರದಿಂದ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನೂ ಆರಾಧನಾ ಮಹೋತ್ಸವದ ಸಂದರ್ಭದಲ್ಲಿ ಲೋಕಾರ್ಪಣೆಗೊಳಿಸಲಾಗುವುದು. ನದೀತೀರದ ಆಧ್ಯಾತ್ಮಿಕ ಥೀಮ್ ಪಾರ್ಕ್, ಮುಖ್ಯ ರಸ್ತೆಯ ಕಲಾತ್ಮಕ ಕಾರಿಡಾರ್ ಹಾಗೂ ಟಿಸಿಎಸ್ ಸಹಯೋಗದಲ್ಲಿ ಪೂರ್ಣಗೊಂಡ ಭೂಗತ ಒಳಚರಂಡಿ ಮತ್ತು ತ್ಯಾಜ್ಯ ಸಂಸ್ಕರಣಾ ಘಟಕ () ಉದ್ಘಾಟನೆಗೊಳ್ಳಲಿದೆ. ಭಕ್ತರ ವಸತಿ ಸೌಲಭ್ಯ ಹೆಚ್ಚಿಸುವ ನಿಟ್ಟಿನಲ್ಲಿ ಬಹುಮಹಡಿ ವಸತಿ ಸಮುಚ್ಚಯ ಸೇರಿದಂತೆ ಹಲವು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಶ್ರೀ ಸುಬುಧೇಂದ್ರ ತೀರ್ಥರು ಹೇಳಿದರು. ಮುಂದಿನ ದಿನಗಳಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ವೈದ್ಯಕೀಯ ಹಾಗೂ ಇತರ ಶೈಕ್ಷಣಿಕ ಸಂಸ್ಥೆಗಳು ಮತ್ತು ಎಂಜಿನಿಯರಿಂಗ್ ಕಾಲೇಜು ಸ್ಥಾಪನೆ ಸೇರಿದಂತೆ ಹಲವು ಮಹತ್ವಾಕಾಂಕ್ಷಿ ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಉದ್ದೇಶವಿದೆ ಎಂದು ಅವರು ತಿಳಿಸಿದರು.

## ದಲಿತರ ಕೊಲೆ ಖಂಡಿಸಿ ದಲಿತ ಸೇನೆ ಪ್ರತಿಭಟನೆ

ಕೊರತೆಯಿಂದ ಮಹಿಳೆಯರು ರಾತ್ರಿ ವೇಳೆ ಬಹಿರ್ದೆಸೆಗೆ ತೆರಳಬೇಕಾದ ಪರಿಸ್ಥಿತಿ ನಿರ್ಮಾಣವಾಗದಂತೆ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯಲ್ಲಿ ಸುಮಾರು 176ರಿಂದ 180 ಗ್ರಾಮ ಪಂಚಾಯಿತಿಗಳಿದ್ದು, ಜಿಲ್ಲೆಯಾದ್ಯಂತ ಅರ್ಹ ಕುಟುಂಬಗಳಿಗೆ ವೈಯಕ್ತಿಕ ಹಾಗೂ ಸಮುದಾಯ ಶೌಚಾಲಯಗಳನ್ನು ನಿರ್ಮಿಸದಿರುವ ಕುರಿತು ದೂರುಗಳು ಕೇಳಿಬರುತ್ತಿವೆ. ಈ ವಿಚಾರದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳಷ್ಟೇ ಅಲ್ಲದೆ, ತಾಲೂಕು ಹಾಗೂ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಅಧಿಕಾರಿಗಳ ಹೊಣೆಗಾರಿಕೆಯನ್ನೂ ನಿಗದಿಪಡಿಸಬೇಕು ಎಂದು ಅವರು ಒತ್ತಾಯಿಸಿದರು.

ಕೆಳಹಂತದ ಅಧಿಕಾರಿಗಳ ವಿರುದ್ಧ ಮಾತ್ರ ಕ್ರಮ ಕೈಗೊಂಡರೆ ಸಮಸ್ಯೆ ಪರಿಹಾರವಾಗುವುದಿಲ್ಲ. ಮೇಲ್ವಿಚಾರಣಾ ಅಧಿಕಾರಿಗಳು ಗ್ರಾಮಗಳಿಗೆ ತೆರಳಿ ಕಾಮಗಾರಿಗಳನ್ನು ಪರಿಶೀಲಿಸಬೇಕು. ಕಚೇರಿಯಲ್ಲಿ ಕುಳಿತು ಬೋಗಸ್ ಅನುಮೋದನೆ ನೀಡಿ ಅನುದಾನ ದುರುಪಯೋಗವಾಗುತ್ತಿದೆ ಎಂಬ ಸಾರ್ವಜನಿಕರ ಆರೋಪಗಳ ಕುರಿತು ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪಿಡಿಒ, ತಾಲೂಕು ಮಟ್ಟದಲ್ಲಿ ತಹಶೀಲ್ದಾರ್ ಹಾಗೂ ಪೊಲೀಸ್ ಅಧಿಕಾರಿಗಳು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಸಿಇಒ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಮ್ಮ ವ್ಯಾಪ್ತಿಯ ಕರ್ತವ್ಯಗಳನ್ನು ಕಟ್ಟುನಿಟ್ಟಾಗಿ ನಿರ್ವಹಿಸಬೇಕು. ದಲಿತ ಪ್ರದೇಶಗಳಲ್ಲಿ ಕುಂದುಕೊರತೆ ಸಭೆ ನಡೆಸಿ ಕಾನೂನು ಅರಿವು ಹಾಗೂ ಅಗತ್ಯ ಭದ್ರತೆ ಒದಗಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಅಶ್ವಿನಿ ಸೇರಿದಂತೆ ಜಿಲ್ಲೆಯಲ್ಲಿ ನಡೆದಿರುವ ಕೊಲೆ ಪ್ರಕರಣಗಳ ತನಿಖೆಯನ್ನು ನಿಷ್ಪಕ್ಷಪಾತವಾಗಿ ಹಾಗೂ ತ್ವರಿತವಾಗಿ ನಡೆಸಬೇಕು. ಘಟನೆಗಳನ್ನು ತಡೆಯುವಲ್ಲಿ ವಿಫಲರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಜಿಲ್ಲಾಡಳಿತದ ಲೋಪಗಳಿಗೆ ಹೊಣೆಗಾರಿಕೆ ನಿಗದಿಪಡಿಸಿ, ಅಗತ್ಯವಿದ್ದಲ್ಲಿ ಜಿಲ್ಲಾ ಪಂಚಾಯಿತಿ ಸಿಇಒ ವಿರುದ್ಧವೂ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬಳಿಕ ಜಿಲ್ಲಾಡಳಿತದ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನಾಕಾರರು ರಾಜ್ಯ ಹಾಗೂ ಜಿಲ್ಲಾಡಳಿತದ ವಿರುದ್ಧ ಘೋಷಣೆಗಳನ್ನು ಕೂಗಿ, ಸಂತ್ರಸ್ತ ಕುಟುಂಬಗಳಿಗೆ ಸೂಕ್ತ ಪರಿಹಾರ, ಭದ್ರತೆ ಹಾಗೂ ಸರ್ಕಾರದ ನೆರವು ನೀಡುವಂತೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಗಿರಿಯಪ್ಪ ನೆಲಹಾಳ್, ನರಸಿಂಹಲು ಕುರ್ಡಿ, ಈರಣ್ಣ, ನಾಗೇಶ್ ಕುರ್ಡಿ, ಈಶ್ವರ ಯಾಕ್ಲಾಸಪುರ, ಸುರೇಶ ಬಾಬು, ವೆಂಕಟೇಶ್ ಚಿಕ್ಕಸೂಗೂರು, ಮಹಾನಂದ ಚಿಕ್ಕಸೂಗೂರು, ಹನುಮಂತ, ಚಿನ್ನಪ್ಪ ಚಿಕ್ಕಸೂಗೂರು, ಆಂಜನೇಯ ಕೊಂಬಿನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂದೇಶ ಪರಿಚಯಿಸುವುದೇ ಸೀರತ್ ಅಭಿಯಾನದ ಉದ್ದೇಶ

ಮಾನವ ಮನಸ್ಸಿನ ಕೃಷಿಕ ಮನದೊಡೆಯ ಪ್ರವಾದಿ ಮುಹಮ್ಮದ್(ಸ) ಹಾಗೂ ಅಬ್ದುಸ್ಸಲಾಮ್ ಪುತ್ತಿಗೆ ರಚಿಸಿರುವ ಸಮಗ್ರ ಕ್ರಾಂತಿಯ ಜ್ಯೋತಿ ಬೆಳಗಿದ ಪೈಗಂಬರ್ ಮುಹಮ್ಮದ್(ಸ) ಕೃತಿಗಳನ್ನು ರಾಜ್ಯಾದ್ಯಂತ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ರಾಜ್ಯದ ವಿವಿಧೆಡೆ ವಿಚಾರಗೋಷ್ಠಿ, ಸಾರ್ವಜನಿಕ ಸಮಾವೇಶ, ಸಂವಾದ, ಚರ್ಚಾಗೋಷ್ಠಿ, ಸೀರತ್ ಪ್ರವಚನ, ಸೀರತ್ ಎಕ್ಸಿಬಿಷನ್, ಸಮಾಜಸೇವಾ ಚಟುವಟಿಕೆಗಳು ಹಾಗೂ ಸೌಹಾರ್ದ ಸಂದೇಶ ಯಾತ್ರೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಜಮಾಅತೆ ಇಸ್ಲಾಮೀ ಹಿಂದ್‌ನ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಅಭ್ಯಾಸ ಮಾಡಿದರೆ ಸಾಧನೆ ಸುಲಭ - ಅಭಿನವ ಶ್ರೀ

ಮಹಾವಿದ್ಯಾಲಯದ ಕಲಾ ಮತ್ತು ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಗೆ ನಡೆದ 202627ನೇ ಸಾಲಿನ ಸ್ವಾಗತ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಮಾತನಾಡಿದ ಅವರು ಪಠ್ಯದ ಜೊತೆಗೆ ಪಠೇತರ ಚಟುವಟಿಕೆಯಲ್ಲೂ ಪಾಲ್ಗೊಂಡು, ನಮ್ಮ ಸಂಸ್ಕೃತಿ, ಸಂಪ್ರದಾಯಗಳನ್ನು ಮೈಗೂಡಿಸಿಕೊಂಡಾಗ ವಿದ್ಯಾರ್ಥಿ ಜೀವನ ಪರಿಪೂರ್ಣವಾಗುತ್ತದೆ ಎಂದರು . ಸರ್ಕಾರಿ ಪದವಿ ಪೂರ್ವಕಾಲೇಜಿನ ಪ್ರಾಚಾರ್ಯರಾದ ಹನುನಜತ ಚನ್ನೂರು ಮಾತನಾಡಿ ಹೊಸ ವಿಚಾರಗಳ ವಿನಿಮಯಕ್ಕೆ ಸ್ವಾಗತ ಕಾರ್ಯಕ್ರಮ ಸಹಕಾರಿಯಾಗಿದೆ. ವಿದ್ಯಾರ್ಥಿ ಜೀವನದಲ್ಲಿ ಹಲವು ಸವಾಲುಗಳು ಎದುರಾಗುತ್ತವೆ. ಅವುಗಳನ್ನು ಧೈರ್ಯದಿಂದ ಎದುರಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದರು. ನವಲಕಲ್ ಸರ್ಕಾರಿ ಪ್ರೌಢಶಾಲೆಯ ಮು.ಗು ರಾಜಶೇಖರ ದಿನ್ನಿ ಮಾತನಾಡಿ ವಿದ್ಯಾರ್ಥಿಗಳಲ್ಲಿ ಶಿಕ್ಷಣ ಪಡೆಯುವ ಛಲ ಇರಬೇಕು.

ಅದಕ್ಕೆ ಪೂರಕವಾದ ಎಲ್ಲ ಶೈಕ್ಷಣಿಕ ಸಂಪನ್ಮೂಲಗಳು ಕಾಲೇಜಿನಲ್ಲಿವೆ. ಅವುಗಳನ್ನು ಸದುಪಯೋಗಪಡಿಸಿಕೊಂಡು ವಿದ್ಯಾರ್ಥಿಗಳು ಪರಿಶ್ರಮದಿಂದ ಅಧ್ಯಯನ ಮಾಡಬೇಕು ಎಂದರು. ಕಾಲೇಜಿನ ಅಧ್ಯಕ್ಷರಾದ ಬ್ರಿಜೇಶ್ ಮಾತನಾಡಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳ ಸಂಖ್ಯೆ, ಅವರು ವಿವಿಧ ಸರ್ಕಾರಿ ಹುದ್ದೆಗಳಿಗೆ ಆಯ್ಕೆಯಾಗಿರುವುದು ಕೇಳಿ ಸಂತೋಷವಾಗಿದೆ. ಕಾಲೇಜಿಗೆ, ವಿದ್ಯಾರ್ಥಿಗಳ ಅನುಕೂಲಕ್ಕೆ ಎಲ್ಲಾ ಸೌಲಭ್ಯಗಳನ್ನು ಒದಗಿಸಿಕೊಡುತ್ತೇವೆ, ಉಪನ್ಯಾಸಕರು ಉತ್ತಮ ಫಲಿತಾಂಶ, ವಿದ್ಯಾರ್ಥಿಗಳ ಭವಿಷ್ಯ ರೂಪಿಸುವತ್ತ ಕೆಲಸ ಮಾಡಿ ಸಾಕು ಎಂದರು. ಪ್ರಾಸ್ತಾವಿಕ ಪ್ರಾಚಾರ್ಯರಾದ ದಾವಲ್ ಸಾಬ್ ಮಾತಮಾಡಿದರು.

ಈ ಸಂದರ್ಭದಲ್ಲಿ ಅಮರೇಶ ಪಾಟೀಲ್, ವಿಶೇಷ ಉಪನ್ಯಾಸಕರಾಗಿ ಬಿ ದೇವರೆಡ್ಡಿ ನಿವೃತ್ತ ಪ್ರಾಚಾರ್ಯರು ಬಿ.ಆರ್.ಬಿಕಾಲೇಜು, ಅಂಗಡಿ ಆದನಗೌಡ ಪಾಟೀಲ್ ವಟಗಲ್ ಪ್ರಾಚಾರ್ಯರು ವೀರಶೈವ ಬಿ.ಎಡ್ ಕಾಲೇಜು ರಾಯಚೂರು, ವಿನೋದ ರೆಡ್ಡಿ ಮುಖಂಡರು ರಾಯಚೂರು, ಶಾಂತಪ್ಪ ಪವಾರ, ಹನುಮೇಶ ಅಧ್ಯಕ್ಷರು ಕ.ಕಾ.ಪ. ಸಂಘ ಸಿರವಾರ , ಮಹಮ್ಮದ್ ಬೆಂಕಿ ಬೆಳಕು ವರದಿಗಾರ, ಮಹೇಶ ಉದಯವಾಣಿ ಪತ್ರಕರಗತ ಸರ್ವರಿಗೂ ಆದರದ ಸ್ವಾಗತ ಮತ್ತು ಸಮಸ್ತ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗ ಇದರು

## ಎಸ್‌ಐಆರ್ ಪರಿಷ್ಕರಣೆ ಕರಡು ಮತದಾರರ ಪಟ್ಟಿ ಪ್ರಕಟ : ಗುಲ್ಬರ್ಗಾ ಗ್ರಾಮೀಣದಲ್ಲಿ 2.21 ಲಕ್ಷ ಮತದಾರರು: ಸಾಹಿತ್ಯಾ ಆಲದಕಟ್ಟಿ



ಕಲಬುರಗಿ,ಆ.25-

ವಿಶೇಷ ಸಂಕ್ಷಿಪ್ತ ಮತದಾರರ ಪರಿಷ್ಕರಣೆ2026ರ () ಕರಡು ಮತದಾರರ ಪಟ್ಟಿಯನ್ನು ಸೋಮವಾರ ಪ್ರಕಟಿಸಲಾಗಿದ್ದು, ಗುಲ್ಬರ್ಗಾ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,21,513 ಮತದಾರರು ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ ಎಂದು ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಕಲಬುರಗಿ ಉಪ ವಿಭಾಗದ ಹಿರಿಯ ಸಹಾಯಕ ಆಯುಕ್ತೆ ಸಾಹಿತ್ಯಾ ಆಲದಕಟ್ಟಿ ತಿಳಿಸಿದ್ದಾರೆ.

ಕ್ಷೇತ್ರದಲ್ಲಿ ಎಸ್‌ಐಆರ್ ಪ್ರಕ್ರಿಯೆಗೂ ಮುನ್ನ 2,74,878 ಮತದಾರರಿದ್ದರು. ಪರಿಷ್ಕರಣೆ ಬಳಿಕ ಪ್ರಕಟವಾದ ಕರಡು ಪಟ್ಟಿಯಲ್ಲಿ 1,14,753 ಪುರುಷರು, 1,06,739 ಮಹಿಳೆಯರು ಹಾಗೂ 21 ಇತರೆ ಮತದಾರರು ಸೇರಿದಂತೆ ಒಟ್ಟು 2,21,513 ಮತದಾರರು ನೋಂದಾಯಿತರಾಗಿದ್ದಾರೆ. ಇವರಲ್ಲಿ 1,595 ಯುವ ಮತದಾರರು, 2,069 ಹಿರಿಯ ನಾಗರಿಕರು ಹಾಗೂ 2,930 ವಿಶೇಷಚೇತನ ಮತದಾರರು ಇದ್ದಾರೆ. ಪ್ರತಿ 1,000 ಪುರುಷ ಮತದಾರರಿಗೆ 930 ಮಹಿಳಾ ಮತದಾರರಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಎಸ್‌ಐಆರ್ ಪ್ರಕ್ರಿಯೆಯಲ್ಲಿ 53,365 ಮತದಾರರನ್ನು ಎಎಸ್‌ಡಿಡಿ ವರ್ಗದಲ್ಲಿ ಗುರುತಿಸಲಾಗಿದೆ. ಕರಡು ಮತದಾರರ ಪಟ್ಟಿಯನ್ನು ಕ್ಷೇತ್ರ ವ್ಯಾಪ್ತಿಯ ತಹಶೀಲ್ದಾರ್ ಕಚೇರಿಗಳು, ಸ್ಥಳೀಯ ಸಂಸ್ಥೆಗಳ ಕಚೇರಿಗಳು ಹಾಗೂ ಮತಗಟ್ಟೆ ಅಧಿಕಾರಿಗಳ ಕಚೇರಿಗಳಲ್ಲಿ ಸಾರ್ವಜನಿಕರ ಪರಿಶೀಲನೆಗಾಗಿ ಪ್ರಕಟಿಸಲಾಗಿದೆ. ಅಲ್ಲದೆ, ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿಯೂ ಪಟ್ಟಿ ಲಭ್ಯವಿದೆ.

ನೋ-ಮ್ಯಾಪಿಂಗ್ ಹಾಗೂ ಅಸಂಗತತೆ ಹೊಂದಿರುವ 10,894 ಮತದಾರರಿಗೆ ಬಿಎಲ್‌ಒಗಳ ಮೂಲಕ ನೋಟಿಸ್ ನೀಡಿ ವಿಚಾರಣೆ ನಡೆಸಲಾಗುವುದು. ಸಾರ್ವಜನಿಕರ ಅನುಕೂಲಕ್ಕಾಗಿ ಆಯಾ ಮತಗಟ್ಟೆ ವ್ಯಾಪ್ತಿಯಲ್ಲಿಯೇ ವಿಚಾರಣೆ ನಡೆಸಲು ಹೆಚ್ಚುವರಿ ಎಇಆರ್‌ಒಗಳನ್ನು ನಿಯೋಜಿಸಲು ಶಿಫಾರಸು ಮಾಡಲಾಗಿದೆ ಎಂದು ಸಾಹಿತ್ಯಾ ಆಲದಕಟ್ಟಿ ತಿಳಿಸಿದರು.

ನೋಟಿಸ್ ಹಾಗೂ ಹಕ್ಕುಆಕ್ಷೇಪಣೆಗಳ ವಿಚಾರಣೆ ಪ್ರಕ್ರಿಯೆಯನ್ನು ಅಕ್ಟೋಬರ್ 22ರೊಳಗೆ ಪೂರ್ಣಗೊಳಿಸಲಾಗುವುದು. ಬಳಿಕ ಅಕ್ಟೋಬರ್ 27ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ ಎಂದು ಅವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕಲಬುರಗಿ ತಹಶೀಲ್ದಾರ್ ಕೆ. ಆನಂದಶೀಲ, ಕಮಲಾಪುರ ತಹಶೀಲ್ದಾರ್ ಮೊಹಮ್ಮದ್ ಮೋಸಿನ್ ಹಾಗೂ ಶಹಾಬಾದ್ ತಹಶೀಲ್ದಾರ್ ನೀಲಪ್ರಭಾ ಉಪಸ್ಥಿತರಿದ್ದರು.

## ಸಿಯುಕೆಯಲ್ಲಿ ದೃಷ್ಟಿದೋಷ ವಿದ್ಯಾರ್ಥಿಗಳಿಗೆ ತಂತ್ರಜ್ಞಾನ ಆಧಾರಿತ ಜ್ಞಾನ ಕಾರ್ಯಾಗಾರ



ಕಲಬುರಗಿ,ಆ.25-

ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕೇಂದ್ರ ಗ್ರಂಥಾಲಯ ಹಾಗೂ ಹಾವೇರಿ ಜಿಲ್ಲೆಯ ರಾಣೆಬೆನ್ನೂರಿನ ಜ್ಞಾನ ವಂದನಾ ಸ್ಪರ್ಧಾತ್ಮಕ ತರಬೇತಿ ಕೇಂದ್ರದ ಸಹಯೋಗದಲ್ಲಿ ದೃಷ್ಟಿದೋಷ ವಿದ್ಯಾರ್ಥಿಗಳಿಗಾಗಿ ''ತಂತ್ರಜ್ಞಾನ ಸಹಾಯದ ಮೂಲಕ ಜ್ಞಾನ ಸಂಪಾದನೆ'' ವಿಷಯದ ವಿಶೇಷ ಕಾರ್ಯಾಗಾರ ಆಯೋಜಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ, ವಿಶ್ವವಿದ್ಯಾಲಯದ ಕೇಂದ್ರ ಗ್ರಂಥಾಲಯದಲ್ಲಿರುವ ಅತ್ಯಾಧುನಿಕ ಬ್ರೇಲ್ ಸಂಪನ್ಮೂಲ ಕೇಂದ್ರ ಎಲ್ಲ ದೃಷ್ಟಿದೋಷ ವಿದ್ಯಾರ್ಥಿಗಳಿಗೆ ಮುಕ್ತವಾಗಿದ್ದು, ಅದರ ಸೌಲಭ್ಯಗಳನ್ನು ಬಳಸಿಕೊಂಡು ಜ್ಞಾನಾರ್ಜನೆ, ಸ್ಪರ್ಧಾತ್ಮಕ ಪರೀಕ್ಷೆಗಳ ಸಿದ್ಧತೆ ಹಾಗೂ ಉನ್ನತ ಶಿಕ್ಷಣದಲ್ಲಿ ಯಶಸ್ಸು ಸಾಧಿಸಬೇಕು ಎಂದು ಕರೆ ನೀಡಿದರು.

ದೃಷ್ಟಿದೋಷ ವಿದ್ಯಾರ್ಥಿಗಳಲ್ಲಿ ವಿಶಿಷ್ಟ ನೆನಪಿನ ಶಕ್ತಿ ಮತ್ತು ಕಲಿಕಾ ಸಾಮರ್ಥ್ಯವಿದ್ದು, ತಂತ್ರಜ್ಞಾನದ ನೆರವಿನಿಂದ ಅದನ್ನು ಇನ್ನಷ್ಟು ವೃದ್ಧಿಸಿಕೊಂಡು ವಿವಿಧ ಸರ್ಕಾರಿ ಹುದ್ದೆಗಳು ಸೇರಿದಂತೆ ಉನ್ನತ ಮಟ್ಟದ ಅವಕಾಶಗಳನ್ನು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಪ್ರೊ. ಬಿಂದು ಎಸ್. ಪಾಟೀಲ ಅವರು, ಸಹಾಯಕ ತಂತ್ರಜ್ಞಾನಗಳ ಮೂಲಕ ದೃಷ್ಟಿದೋಷ ವಿದ್ಯಾರ್ಥಿಗಳಿಗೆ ಜ್ಞಾನವನ್ನು ಸುಲಭವಾಗಿ ತಲುಪಿಸುವ ಇಂತಹ ಕಾರ್ಯಾಗಾರಗಳು ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ಅತ್ಯಂತ ಮಹತ್ವದ್ದಾಗಿವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಂಧ ವಿದ್ಯಾರ್ಥಿಗಳಿಗಾಗಿ ಸಿದ್ಧಪಡಿಸಲಾದ ''ಟೂತ್ ಟೀಚ್'' ಪುಸ್ತಕದ ಬ್ರೇಲ್ ಆವೃತ್ತಿ ಹಾಗೂ ಎಂ.ಪಿ.3 ಆಡಿಯೋ ಆವೃತ್ತಿಯನ್ನು ಲೋಕಾರ್ಪಣೆಗೊಳಿಸಲಾಯಿತು.

ಕೇಂದ್ರ ಗ್ರಂಥಾಲಯದ ಮುಖ್ಯಸ್ಥ ಡಾ. ಪಿ.ಎಸ್. ಕಟ್ಟಿಮನಿ ಬ್ರೇಲ್ ಸಂಪನ್ಮೂಲ ಕೇಂದ್ರದ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು. ಜ್ಞಾನ ವಂದನಾ ತರಬೇತಿ ಕೇಂದ್ರದ ಅಧ್ಯಕ್ಷ ಅಚ್ಯುತ್ ನಾಯ್ಕ ಸಿಯುಕೆಯ ಬ್ರೇಲ್ ಸಂಪನ್ಮೂಲ ಕೇಂದ್ರವನ್ನು ದೃಷ್ಟಿದೋಷ ವಿದ್ಯಾರ್ಥಿಗಳ ಸಬಲೀಕರಣದ ಮಹತ್ವದ ಹೆಜ್ಜೆ ಎಂದು ಶ್ಲಾಘಿಸಿದರು.

ಕಾರ್ಯಾಗಾರದಲ್ಲಿ 30ಕ್ಕೂ ಹೆಚ್ಚು ದೃಷ್ಟಿದೋಷ ವಿದ್ಯಾರ್ಥಿಗಳು ಭಾಗವಹಿಸಿದ್ದು, ಬ್ರೇಲ್ ಸಂಪನ್ಮೂಲ ಕೇಂದ್ರ, ಇ-ಡಿಜಿಟಲ್ ಗ್ರಂಥಾಲಯ ಸೇವೆಗಳು ಹಾಗೂ ಸಹಾಯಕ ತಂತ್ರಜ್ಞಾನಗಳ ಬಳಕೆಯ ಕುರಿತು ಪ್ರಾಯೋಗಿಕ ತರಬೇತಿ ನೀಡಲಾಯಿತು.

ಈ ಸಂದರ್ಭದಲ್ಲಿ ಪ್ರಾಧ್ಯಾಪಕರಾದ ಡಾ. ವಿಜಯಕುಮಾರ್ ಹಾಗೂ ಡಾ. ರಾಮಲಿಂಗ, ಕೇಂದ್ರ ಗ್ರಂಥಾಲಯದ ಸಿಬ್ಬಂದಿಗಳಾದ ರಾಜೇಶ್ ದಾಸ್, ಬಸವರಾಜ ಯಾದವಾಡ, ನಿಂಗಣ್ಣ, ಪ್ರಕಾಶ್ ಎಸ್., ರಾಹುಲ್ ರಾಠೋಡ್, ಸಾಗರ ಕಡಬೆ, ಸತೀಶ್ ಕುಮಾರ್ ಹಾಗೂ ಶಿವಕುಮಾರ್ ಉಪಸ್ಥಿತರಿದ್ದರು




## ಸಮಾಜವಾದಿ ಜನತಾ ಪಕ್ಷದಿಂದ ಎಲ್ಲ ಚುನಾವಣೆಯಲ್ಲಿ ಸ್ಪರ್ಧೆ : ಜಿ.ಎಂ.ಗಾಡ್ಕರ್

ಬೀದರ್,ಆ.25-

ಸಮಾಜವಾದಿ ಜನತಾ ಪಕ್ಷವು ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಸಂಘಟನೆ ಬಲಪಡಿಸುವ ಮೂಲಕ ಮುಂಬರುವ ಎಲ್ಲ ಚುನಾವಣೆಗಳಲ್ಲಿ ಸ್ಪರ್ಧಿಸಲಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಜಿ.ಎಂ. ಗಾಡ್ಕರ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳಲ್ಲಿ ಜಾತೀಯತೆ, ಮೇಲು-ಕೀಳು ಹಾಗೂ ಅಸಮಾನತೆ ಇದೆ ಎಂದು ಆರೋಪಿಸಿದರು. ಇವುಗಳನ್ನು ಮೀರಿ ಸಮ ಸಮಾಜ ನಿರ್ಮಿಸುವ ಉದ್ದೇಶದಿಂದ ಸಮಾಜವಾದಿ ಜನತಾ ಪಕ್ಷವನ್ನು ಕಟ್ಟಲಾಗಿದೆ ಎಂದರು.

ದೇಶದಲ್ಲಿ ಇಂದಿಗೂ ಹಲವು ದುರ್ಬಲ ವರ್ಗಗಳ ಜನರಿಗೆ ವಾಸಿಸಲು ಮನೆ, ದುಡಿದು ಬದುಕಲು ಭೂಮಿ, ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗ ಹಾಗೂ ಬಡವರಿಗೆ ಸಮರ್ಪಕ ಆರೋಗ್ಯ ಮತ್ತು ಆರ್ಥಿಕ ಸೌಲಭ್ಯಗಳು ಸೇರಿದಂತೆ ಕನಿಷ್ಠ ಮೂಲಭೂತ ಹಕ್ಕುಗಳು ದೊರೆಯದ ಪರಿಸ್ಥಿತಿ ಇದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷಗಳು ಅಸ್ಪೃಶ್ಯತೆ, ಅಸಮಾನತೆ, ಜಾತೀಯತೆ ಹಾಗೂ ಮತಾಂಧತೆಯಂತಹ ಜನವಿರೋಧಿ ನೀತಿಗಳನ್ನು ಅನುಸರಿಸುತ್ತಿವೆ ಎಂದು ಆರೋಪಿಸಿದ ಅವರು, ಜನರ ತೆರಿಗೆ ಹಣದ ದುರ್ಬಳಕೆ ಹಾಗೂ ಭ್ರಷ್ಟಾಚಾರದಿಂದ ಪ್ರಜಾಪ್ರಭುತ್ವ ವಿರೋಧಿ ಆಡಳಿತ ನಡೆಯುತ್ತಿದೆ ಎಂದು ದೂರಿದರು.

ಸಮಾಜವಾದಿ ಜನತಾ ಪಕ್ಷವು ಈಗಾಗಲೇ ರಾಜ್ಯದ ಕೆಲವು ಲೋಕಸಭೆ ಹಾಗೂ ವಿಧಾನಸಭಾ ಕ್ಷೇತ್ರಗಳಲ್ಲಿ ಚುನಾವಣೆಗೆ ಸ್ಪರ್ಧಿಸಿದ್ದು, ಕೆಲವು ಕ್ಷೇತ್ರಗಳಲ್ಲಿ ಪಕ್ಷಕ್ಕೆ 10 ಸಾವಿರಕ್ಕೂ ಅಧಿಕ ಮತಗಳು ಬಂದಿವೆ. ಬೀದರ್‌ನಲ್ಲಿಯೂ ಆರು ತಿಂಗಳೊಳಗೆ ಪಕ್ಷವನ್ನು ಬಲಪಡಿಸುವ ಕಾರ್ಯ ಕೈಗೊಳ್ಳಲಾಗುವುದು. ಪಂಚಾಯಿತಿ ಚುನಾವಣೆ ಸೇರಿದಂತೆ ರಾಜ್ಯದಲ್ಲಿ ನಡೆಯಲಿರುವ ಮುಂಬರುವ ಎಲ್ಲ ಚುನಾವಣೆಗಳಲ್ಲಿ ಪಕ್ಷ ಸ್ಪರ್ಧಿಸಲಿದೆ ಎಂದು ಜಿ.ಎಂ. ಗಾಡ್ಕರ್ ಹೇಳಿದರು.

ಈ ಸಂದರ್ಭದಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಸತೀಶ್ ಪಾಟೀಲ್, ಬಾಲಾಜಿ ಔರಾದ್ಕರ್ ಶೇಕ್ ಶಿಜಾಉದ್ದಿನ್, ವಿನೋದ್ ಕುಲಕರ್ಣಿ, ದೇವಿದಾಸ್ ರಾಥೋಡ್, ರವೀಂದ್ರ ಕೊಳ್ಳುರ್ ರೂಪಾ ಜೋಷಿ ಹಾಗೂ ರಾಜಕುಮಾರ್ ಮಾಳಗೆ ಸೇರಿದಂತೆ ಇತರರು ಇದ್ದರು.

## ಯಾದಗಿರಿಗೆ 287.70 ಕೋಟಿ ರೂ. ವೆಚ್ಚದ ಸಮಗ್ರ ಒಳಚರಂಡಿ ಯೋಜನೆ



ಯಾದಗಿರಿ,ಆ.25-

ನಗರದ ಸಮಗ್ರ ಅಭಿವೃದ್ಧಿ, ನೈರ್ಮಲ್ಯ ಹಾಗೂ ಸಾರ್ವಜನಿಕ ಆರೋಗ್ಯ ಸುಧಾರಣೆಗೆ ₹287.70 ಕೋಟಿ ವೆಚ್ಚದಲ್ಲಿ ಸಮಗ್ರ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಯೋಜನೆಯನ್ನು ಸರ್ಕಾರಕ್ಕೆ ಪ್ರಸ್ತಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಪ್ರಕಟಣೆಯ ಪ್ರಕಾರ, ಯೋಜನೆಯ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಗೊಂಡಿದ್ದು, ಈಗಾಗಲೇ ತಾಂತ್ರಿಕ ಅನುಮೋದನೆ ಪಡೆದಿದೆ. ಆಡಳಿತಾತ್ಮಕ ಅನುಮೋದನೆಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

9 ಎಂಎಲ್‌ಡಿ ಸಾಮರ್ಥ್ಯದ ಮಲಿನ ನೀರು ಸಂಸ್ಕರಣಾ ಘಟಕ (ಎಸ್‌ಟಿಪಿ) ಸ್ಥಾಪನೆ. ಭೀಮಾ ನದಿಯ ಸಮೀಪ ವೆಟ್‌ವೆಲ್ ನಿರ್ಮಿಸಿ ನಗರದ ವಿವಿಧ ಭಾಗಗಳ ಕೊಳಚೆ ನೀರನ್ನು ಸಂಗ್ರಹಿಸುವ ವ್ಯವಸ್ಥೆ. ಪಂಪ್ ಮೂಲಕ ಮಲಿನ ನೀರನ್ನು ಎಸ್‌ಟಿಪಿಗೆ ರವಾನಿಸಿ ವೈಜ್ಞಾನಿಕವಾಗಿ ಸಂಸ್ಕರಣೆ. ಸಂಸ್ಕರಿಸಿದ ನೀರನ್ನು ಮಾತ್ರ ನಿಯಮಾನುಸಾರ ವಿಲೇವಾರಿ ಮಾಡುವ ವ್ಯವಸ್ಥೆ.

ಯೋಜನೆ ಜಾರಿಯಾದ ಬಳಿಕ ನಗರದ ತೆರೆದ ಚರಂಡಿಗಳಿಂದ ನೇರವಾಗಿ ಭೀಮಾ ನದಿಗೆ ಸೇರುತ್ತಿರುವ ಕೊಳಚೆ ನೀರನ್ನು ತಡೆಯಲು ಸಾಧ್ಯವಾಗಲಿದೆ. ಇದರಿಂದ ನದಿಯ ಜಲಮಾಲಿನ್ಯ ಕಡಿಮೆಯಾಗುವ ಜೊತೆಗೆ ಪರಿಸರ ಸಂರಕ್ಷಣೆಗೆ ಸಹಕಾರಿಯಾಗಲಿದೆ.

ಸಮಗ್ರ ಒಳಚರಂಡಿ ವ್ಯವಸ್ಥೆಯಿಂದ ನಗರದ ಸ್ವಚ್ಛತೆ ಮತ್ತು ನೈರ್ಮಲ್ಯ ವ್ಯವಸ್ಥೆಯಲ್ಲಿ ಮಹತ್ವದ ಸುಧಾರಣೆ ಕಂಡುಬರಲಿದ್ದು, ಮಲಿನ ನೀರಿನ ವೈಜ್ಞಾನಿಕ ನಿರ್ವಹಣೆಯಿಂದ ಸಾರ್ವಜನಿಕ ಆರೋಗ್ಯಕ್ಕೂ ಉತ್ತಮ ಪರಿಣಾಮ ಬೀಳಲಿದೆ.

ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ದೊರೆಯುತ್ತಿದ್ದಂತೆಯೇ ಯೋಜನೆ ಅನುಷ್ಠಾನಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ಬೃಹತ್ ಪ್ರತಿಭಟನೆ



ಯಾದಗಿರಿ,ಆ.25-

ರಾಯಚೂರು ಜಿಲ್ಲೆಯಲ್ಲಿ ದಲಿತ ಸಮುದಾಯದ ಯುವಕರು ಹಾಗೂ ಮಹಿಳೆಯರ ಮೇಲೆ ನಡೆಯುತ್ತಿರುವ ಕೊಲೆ, ಅತ್ಯಾಚಾರ, ಜಾತಿ ನಿಂದನೆ ಹಾಗೂ ದೌರ್ಜನ್ಯ ಪ್ರಕರಣಗಳನ್ನು ತಡೆಯುವಲ್ಲಿ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ವಿಫಲವಾಗಿದೆ ಎಂದು ಆರೋಪಿಸಿ ದಲಿತ ಸಂಘಟನೆಗಳ ಒಕ್ಕೂಟದ ಶಹಾಪುರ ಘಟಕ ಬೃಹತ್ ಪ್ರತಿಭಟನೆ ನಡೆಸಿತು.

ಪ್ರತಿಭಟನಾಕಾರರು ತಹಸೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ, ದೇವದುರ್ಗ ತಾಲೂಕಿನ ಹದ್ದಿನಾಳ ಗ್ರಾಮದ ಭೂಮಾನಂದ ಕೊಲೆ, ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದ ಅಶ್ವಿನಿ ಛಲವಾದಿ ಅತ್ಯಾಚಾರ ಮತ್ತು ಕೊಲೆ, ಲಿಂಗಸುಗೂರು ತಾಲೂಕಿನ ಕರಡಕಲ್ ಗ್ರಾಮದ ರಾಮ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸುವಂತೆ ಆಗ್ರಹಿಸಿದರು.

ಸಂತ್ರಸ್ತರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಪ್ರಕರಣಗಳ ತನಿಖೆಯನ್ನು ನಿಷ್ಪಕ್ಷಪಾತವಾಗಿ ಹಾಗೂ ತ್ವರಿತವಾಗಿ ನಡೆಸಬೇಕು. ಆರೋಪಿಗಳು ಯಾವುದೇ ರಾಜಕೀಯ ಪ್ರಭಾವದಿಂದ ತಪ್ಪಿಸಿಕೊಳ್ಳದಂತೆ ಕಠಿಣ ಕಾನೂನು ಕ್ರಮ ಕೈಗೊಂಡು, ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕು ಎಂದು ಒತ್ತಾಯಿಸಿದರು.

ದಲಿತ ಸಮುದಾಯದ ಮೇಲಿನ ದೌರ್ಜನ್ಯ ತಡೆಗೆ ಜಾರಿಯಲ್ಲಿರುವ ಕಾನೂನುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ನೊಂದ ಕುಟುಂಬಗಳಿಗೆ ತಕ್ಷಣ ಪರಿಹಾರ, ಸರ್ಕಾರದ ನೆರವು ಹಾಗೂ ಕಾನೂನು ಸಹಾಯ ಒದಗಿಸಬೇಕು ಎಂದು ಮನವಿಯಲ್ಲಿ ತಿಳಿಸಿದರು.

ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಕರ್ತವ್ಯಲೋಪ ಎಸಗಿರುವ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಿ, ತಪ್ಪು ಸಾಬೀತಾದರೆ ಕಾನೂನುಬದ್ಧ ಹಾಗೂ ಆಡಳಿತಾತ್ಮಕ ಕ್ರಮ ಕೈಗೊಳ್ಳಬೇಕು. ಅಗತ್ಯವಿದ್ದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನು ವರ್ಗಾವಣೆ ಮಾಡಬೇಕು ಎಂದು ದಲಿತ ಸಂಘಟನೆಗಳ ಒಕ್ಕೂಟ ಸರ್ಕಾರವನ್ನು ಆಗ್ರಹಿಸಿತು.

ಈ ಸಂದರ್ಭದಲ್ಲಿ ನೀಲಕಂಠ ಬಡಿಗೇರ, ಬಾಬುರಾವ್ ಭೂತಾಳಿ, ಶಂಕರ್ ಸಿಂಗೆ, ಮಾನಯ್ಯ ಹೊಸ್ಮನಿ, ಮಲ್ಲಪ್ಪ, ಚಂದ್ರು, ಚಕ್ರವರ್ತಿ, ಮಹಾದೇವ ದಿಗ್ಗಿ, ರಾಯಪ್ಪ ಸಾಲಿಮನಿ, ಮೋಹನರಾಜಗೌಡ ಕನ್ಯಾಕೋಳ್ಳೂರ, ದೇವಿಂದ್ರಪ್ಪ ಗೌಡೂರ, ಚಂದ್ರಶೇಖರ ಗುತ್ತಿಗೆದಾರ, ಪರಶುರಾಮ ಮಾಲಗತ್ತಿ, ಚಂದ್ರಶೇಖರ ಹತ್ತಿಗುಡುರ, ಲಕ್ಷ್ಮಣ ಹಳಿಸಗರ, ರಾಘು ಹಂಚಿನಾಳ, ದೇವರಾಜ, ನಾಗರಾಜ, ಗೌತಮ್, ಸೇರಿದಂತೆ ಅನೇಕರು ಇದ್ದರು.

ನಿಮ್ಮೂರು ಸುದ್ದಿ

## ಸಂಪಾದಕೀಯ

# ಸರ್ಕಾರ, ಸಾರ್ವಜನಿಕ ಆರೋಗ್ಯ ಮತ್ತು ಸಚಿವ ಖಾದರ್



83 ದಿನಗಳಲ್ಲಿ 10 ಕ್ರಮಗಳತ್ತ ಗಮನ ಹರಿಸಿದ ಆರೋಗ್ಯ ಸಚಿವ ಯು.ಟಿ. ಖಾದರ್, ಅಷ್ಟನ್ನೂ ಅನುಷ್ಠಾನ ಮಾಡಲಾಗಿಲ್ಲ. ಆಮೂಲಾಗ್ರ ಬದಲಾವಣೆ ಸಾಧ್ಯವೂ ಇಲ್ಲ. ಆದರೆ, ಆ ನಿಟ್ಟಿನಲ್ಲಿ ನಿಧಾನವಾಗಿ ಯಶಸ್ಸು ಗಳಿಸುತ್ತಿದ್ದಾರೆ. ಡಿ.ಕೆ. ಶಿವಕುಮಾರ್ ಸಂಪುಟದಲ್ಲಿರುವ ಸಚಿವರ ಪೈಕಿ ಖಾದರ್ ಕೊಂಚ ಮುಂದಿದ್ದಾರೆ, ಜನಪರ ಕೆಲಸಗಳತ್ತ ಕಾರ್ಯೋನ್ಮುಖರಾಗಿದ್ದಾರೆ. ಅದು ಆರಂಭಶೂರತ್ವವಾಗದಿರಲಿ.

ಪ್ರಜಾಪ್ರಭುತ್ವದಲ್ಲಿ ಸರ್ಕಾರದ ಕೆಲಸ ಕೇವಲ ರಸ್ತೆ, ಸೇತುವೆ, ವಿದ್ಯುತ್, ನೀರು ಅಥವಾ ಆರ್ಥಿಕ ಅಭಿವೃದ್ಧಿಗಾಗಿ ಮಾತ್ರ ಸೀಮಿತವಾದುದಲ್ಲ. ಜನರು ಆರೋಗ್ಯವಾಗಿ, ಗೌರವದಿಂದ ಮತ್ತು ಸುರಕ್ಷಿತವಾಗಿ ಬದುಕುವ ಪರಿಸರವನ್ನು ನಿರ್ಮಿಸುವುದು ಕೂಡ ಸರ್ಕಾರದ ಮೂಲ ಜವಾಬ್ದಾರಿಗಳಲ್ಲೊಂದು.

ಸಾರ್ವಜನಿಕ ಆಸ್ಪತ್ರೆ ಎಂದರೆ ಬಡವರ ಆಸ್ಪತ್ರೆಯಲ್ಲ. ಬಡವರಿಗೆ ಉಚಿತ ಚಿಕಿತ್ಸೆ ನೀಡುವುದು ಸರ್ಕಾರದ ಧರ್ಮದ ಕೆಲಸವಲ್ಲ. ಬಡಕುಟುಂಬದ ವ್ಯಕ್ತಿಗೆ ಗಂಭೀರ ಕಾಯಿಲೆ ಬಂದರೆ, ಚಿಕಿತ್ಸೆಯ ವೆಚ್ಚದಿಂದ ಆ ಕುಟುಂಬ ಸಾಲಕ್ಕೆ ಸಿಲುಕಬಹುದು. ಮಕ್ಕಳ ಶಿಕ್ಷಣ ನಿಲ್ಲಬಹುದು. ಒಡವೆ, ಮನೆ, ಜಮೀನು ಅಥವಾ ಆಸ್ತಿಯನ್ನು ಮಾರಬೇಕಾಗಬಹುದು. ಆರೋಗ್ಯಕ್ಕಾಗಿ ಜನರು ವ್ಯಯಿಸುವ ವಿಪರೀತ ವೆಚ್ಚಕ್ಕಿಂತ, ಸಾವೆ ವಾಸಿ ಎನಿಸಬಹುದು. ಹೀಗಾಗಿ ಸಾರ್ವಜನಿಕ ಆಸ್ಪತ್ರೆ ಕೇವಲ ಚಿಕಿತ್ಸೆ ನೀಡುವ ಸ್ಥಳವಲ್ಲ; ಅದು ಬಡ ಕುಟುಂಬವನ್ನು ಆರ್ಥಿಕವಾಗಿ ಕುಸಿಯದಂತೆ ಕಾಪಾಡುವ ಕೇಂದ್ರ ಕೂಡ.

ಜನ ತೆರಿಗೆ ಕಟ್ಟುತ್ತಾರೆ. ತೆರಿಗೆ ಹಣದಿಂದ ಸರ್ಕಾರ ಬಜೆಟ್ ರೂಪಿಸುತ್ತದೆ. ಆದ್ದರಿಂದ ಸಾರ್ವಜನಿಕ ಆರೋಗ್ಯ ಸೇವೆ ಜನರ ಹಕ್ಕಿನ ಭಾಗ. ಸರ್ಕಾರ ತನ್ನ ನಾಗರಿಕರಿಗೆ ನೀಡುವ ಸಾಮಾಜಿಕ ಭದ್ರತೆಯ ಭಾಗ. ಬಡವರು, ಮಧ್ಯಮ ವರ್ಗದವರು, ಮಹಿಳೆಯರು ಮತ್ತು ಮಕ್ಕಳು, ವೃದ್ಧರು, ಗ್ರಾಮೀಣ ಜನರು- ಎಲ್ಲರಿಗೂ ಗುಣಮಟ್ಟದ ಚಿಕಿತ್ಸೆ ದೊರೆಯುವ ವ್ಯವಸ್ಥೆ ಇರಬೇಕು. ಉತ್ತಮ ಸಾರ್ವಜನಿಕ ಆಸ್ಪತ್ರೆ, ಗುಣಮಟ್ಟದ ಚಿಕಿತ್ಸೆ , ಜನ ಸುರಕ್ಷಿತವಾಗಿ ಬದುಕುವ ಭರವಸೆ ನೀಡಬೇಕಾದ್ದು ಸರ್ಕಾರದ ಆದ್ಯ ಕರ್ತವ್ಯವಾಗಬೇಕು.

ಈ ನಿಟ್ಟಿನಲ್ಲಿ ಆರೋಗ್ಯ ಖಾತೆ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ ಯು.ಟಿ. ಖಾದರ್, ಜೂನ್ 3ರಿಂದ ಆಗಸ್ಟ್ 25ರವರೆಗೆ, ಕೇವಲ 83 ದಿನಗಳಲ್ಲಿ ಆರೋಗ್ಯ ಇಲಾಖೆಯನ್ನು ಪುನಶ್ಚೇತನಗೊಳಿಸುವ ನಿಟ್ಟಿನಲ್ಲಿ ಹಲವು ಕ್ರಮಗಳನ್ನು ಕೈಗೊಂಡಿದ್ದಾರೆ. ಆ ಕ್ರಮಗಳು ಬೃಹತ್ ಯೋಜನೆಗಳಲ್ಲ, ಹಣ ಮತ್ತು ಪ್ರಚಾರ ತರುವುದಿಲ್ಲ. ಹಾಗಂತ ನಿರ್ಲಕ್ಷಿಸಿ ಸುಮ್ಮನಿರುವಂತೆಯೂ ಇಲ್ಲ.

ಖಾದರ್ ಆರೋಗ್ಯ ಖಾತೆ ವಹಿಸಿಕೊಳ್ಳುತ್ತಿದ್ದಂತೆ, ಮಾಡಿದ ಮೊದಲ ಕೆಲಸವೆಂದರೆ, ಸರ್ಕಾರಿ ಆಸ್ಪತ್ರೆಗಳಿಗೆ ದಿಢೀರ್ ಭೇಟಿ ನೀಡಿದ್ದು. ಅದು ಮಾಧ್ಯಮಗಳಲ್ಲಿ ಸುದ್ದಿಯಾಯಿತು. ಸಂಚಲನ ಸೃಷ್ಟಿಸಿತು. ವಿರೋಧ ಪಕ್ಷಗಳಿಂದ, ಮೂರು ವರ್ಷ ಖಾಲಿ ಕುಳಿತಿದ್ದರಲ್ಲ, ಸಚಿವರಾದ ತಕ್ಷಣ ಚುರುಕಾಗಿದ್ದಾರೆ, ಪ್ರಚಾರ ಪಡೆಯುತ್ತಿದ್ದಾರೆ ಎಂಬ ಟೀಕೆಗೂ ಗುರಿಯಾಯಿತು, ಇರಲಿ.

ಆದರೆ ಸಚಿವರು ಆಸ್ಪತ್ರೆಗಳತ್ತ ಹೆಜ್ಜೆ ಹಾಕಿದ್ದು, ಸಾರ್ವಜನಿಕ ಆರೋಗ್ಯ ಕ್ಷೇತ್ರದ ಯಥಾವತ್ ಚಿತ್ರಣ ಕಣ್ಣಿಗೆ ಬೀಳುವಂತಾಯಿತು. ವೈದ್ಯರು ಕೆಲಸ ಕದಿಯುವುದು, ಚಿಕಿತ್ಸೆ ನಿರಾಕರಿಸುವುದು, ಔಷಧಿ ಇಲ್ಲವೆಂದು ಚೀಟಿ ಬರೆದುಕೊಡುವುದು, ಸೋಮಾರಿ ಸಿಬ್ಬಂದಿ, ಲಂಚಗುಳಿತನ- ಎಲ್ಲವನ್ನು ಖುದ್ದು ಕಾಣುವಂತಾಯಿತು. ಹಾಗಂತ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಸರ್ಕಾರ ಎಲ್ಲವನ್ನು ಅಚ್ಚುಕಟ್ಟಾಗಿ ವ್ಯವಸ್ಥೆ ಮಾಡಿದೆ ಅಂತಲ್ಲ. ಎಷ್ಟೋ ಆಸ್ಪತ್ರೆಗಳಲ್ಲಿ ಮುಖ್ಯವಾಗಿ ವೈದ್ಯರು ಮತ್ತು ಸಿಬ್ಬಂದಿಗಳೇ ಇರುವುದಿಲ್ಲ. ಶುಚಿತ್ವವಿಲ್ಲದೆ ಆಸ್ಪತ್ರೆಯೊಳಕ್ಕೆ ಕಾಲಿಡಲಾಗುವುದಿಲ್ಲ. ನಿಯಮಿತವಾಗಿ ಆಹಾರ-ಔಷಧ ಸರಬರಾಜು ಆಗುವುದಿಲ್ಲ. ಸುಸಜ್ಜಿತ ಕಟ್ಟಡಗಳ ಸುರಕ್ಷತೆಯಿಲ್ಲ. ತುರ್ತು ಸೇವೆಯಂತೂ ಕೇಳುವಂತಿಲ್ಲ. ಈ ಇಲ್ಲಗಳೇ ಜನರನ್ನು ಅನಿವಾರ್ಯವಾಗಿ ಖಾಸಗಿ ಆಸ್ಪತ್ರೆಗಳತ್ತ ದೂಡುತ್ತದೆ. ಅಲ್ಲಿಯ ದುಬಾರಿ ಚಿಕಿತ್ಸೆ ಅವರನ್ನು ಹಿಂಡಿ ಹಿಪ್ಪೆ ಮಾಡುತ್ತದೆ. ಸಹಜವಾಗಿಯೇ ಅದು ಅಸಮಾನತೆಯನ್ನು ಹೆಚ್ಚಿಸುತ್ತದೆ. ಆಗ ಜನರಿಂದ ಆಯ್ಕೆಯಾದ ಸರ್ಕಾರ, ಸಚಿವರು, ಇಲಾಖೆ ಇದ್ದೂ ಸತ್ತಂತಾಗುತ್ತದೆ.

ಖಾದರ್ ಆಸ್ಪತ್ರೆಗಳಿಗೆ ದಿಢೀರ್ ಭೇಟಿ ನೀಡಿದ ಫಲವೋ ಏನೋ ಆ ತಕ್ಷಣವೇ ವೈದ್ಯರ ನೇಮಕ, ಸಿಬ್ಬಂದಿ ನೇಮಕಕ್ಕೆ ಅನುಮೋದನೆ, ಆಸ್ಪತ್ರೆ ಮೇಲ್ವಿಚಾರಣೆ, ಆಯುಷ್ಮಾನ್ ಕರ್ನಾಟಕ, ಆಹಾರ ಸುರಕ್ಷತೆ, ನಕಲಿ ಔಷಧಿ, ಕ್ಯೂಆರ್ ಕೋಡ್ ಬಳಸಿ ದೂರು ಸಲ್ಲಿಕೆ ವ್ಯವಸ್ಥೆ, ಮಹಿಳಾ ಆರೋಗ್ಯ ನೀತಿ, ಬೈಕ್ ಆಂಬುಲೆನ್ಸ್ ಮತ್ತು ವೆನ್ಲಾಕ್ ಆಸ್ಪತ್ರೆ ಅಭಿವೃದ್ಧಿಯಂತಹ ತುರ್ತು ಕ್ರಮಗಳನ್ನು ಕೈಗೆತ್ತಿಕೊಂಡರು.

83 ದಿನಗಳಲ್ಲಿ 10 ಕ್ರಮಗಳತ್ತ ಗಮನ ಹರಿಸಿದ ಖಾದರ್, ಅಷ್ಟನ್ನೂ ಅನುಷ್ಠಾನ ಮಾಡಲಾಗಿಲ್ಲ. ಆಮೂಲಾಗ್ರ ಬದಲಾವಣೆ ಸಾಧ್ಯವೂ ಇಲ್ಲ. ಆದರೆ, ಆ ನಿಟ್ಟಿನಲ್ಲಿ ನಿಧಾನವಾಗಿ ಯಶಸ್ಸು ಗಳಿಸುತ್ತಿದ್ದಾರೆ. ಮೊದಲಿಗೆ, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಪ್ರಮುಖವಾಗಿ ಕೇಳಿಬರುತ್ತಿದ್ದ ವೈದ್ಯರ ಕೊರತೆ ನೀಗಿಸುವ ನಿಟ್ಟಿನಲ್ಲಿ, 200 ಎಂಬಿಬಿಎಸ್ ವೈದ್ಯರ ನೇರ ನೇಮಕಾತಿ ಆಗಿದೆ. ಆಹಾರ ಸುರಕ್ಷತೆಗೆ ಸಂಬಂಧಿಸಿದಂತೆ ಸಚಿವ ಖಾದರ್ ಸೂಚನೆ ಮೇರೆಗೆ ಕಾರ್ಯಾಚರಣೆ ಆರಂಭಿಸಿದ ಆಹಾರ ಸುರಕ್ಷತಾ ಇಲಾಖೆ ಅಧಿಕಾರಿಗಳು ಸುಮಾರು 70ಕ್ಕೂ ಹೆಚ್ಚು ಹೋಟೆಲ್, ರೆಸ್ಟೋರೆಂಟ್, ಡಾಬಾಗಳ ಮೇಲೆ ದಿಢೀರ್ ದಾಳಿ ನಡೆಸಿದ್ದಾರೆ. ಕಳಪೆ ಆಹಾರ ಗುಣಮಟ್ಟ, ಸ್ವಚ್ಛತೆ ಕೊರತೆ ಹಾಗೂ ಆಹಾರ ಸುರಕ್ಷತಾ ನಿಯಮಗಳ ಉಲ್ಲಂಘನೆಗೆ ಕೇಸು ದಾಖಲಿಸಿ, ತನಿಖೆ ಕೈಗೊಂಡಿದ್ದಾರೆ.

ಸರ್ಕಾರ ಒಂದು ಕಡೆ ಆಸ್ಪತ್ರೆಗಳನ್ನು ನಿರ್ಮಿಸಿ, ಮತ್ತೊಂದು ಕಡೆ ಜನರಲ್ಲಿ ಕಾಯಿಲೆ ಹೆಚ್ಚಿಸುವ ಉತ್ಪನ್ನಗಳ ಸುಲಭ ಲಭ್ಯತೆಯನ್ನು ನಿಯಂತ್ರಿಸಲು ವಿಫಲವಾದರೆ ಅದು ಅಪೂರ್ಣ ಆರೋಗ್ಯ ನೀತಿ ಎನಿಸಿಕೊಳ್ಳುತ್ತದೆ. ಆ ನಿಟ್ಟಿನಲ್ಲಿ ರಾಜ್ಯದಲ್ಲಿ ಕೃತಕ ಪನ್ನೀರ್, ಚೀಸ್, ಬೆಣ್ಣೆ, ಫುಡ್ ಕಲರ್, ಅಜಿನಮೊಟೊ ಬಳಕೆಯನ್ನು ನಿಷೇಧಿಸಿರುವುದು ಶ್ಲಾಘನೀಯ ಕ್ರಮ.

ಆಹಾರ ಸುರಕ್ಷತಾ ನಿಯಮಾವಳಿ ಪ್ರಕಾರ, ಪನ್ನೀರ್ ಎಂಬುದು ಕೇವಲ ಹಾಲಿನಿಂದ ಮಾತ್ರ ತಯಾರಾಗುವ ಶುದ್ಧ ಉತ್ಪನ್ನ. ಆದರೆ, ಹಾಲಿನ ಉತ್ಪನ್ನದ ಬದಲಿಗೆ ಸಸ್ಯಜನ್ಯ ಎಣ್ಣೆ, ಕೊಬ್ಬು ಬಳಸಿ ತಯಾರಿಸುವ ಅನಲಾಗ್ ಪನ್ನೀರ್ ಅನ್ನು ಪನ್ನೀರ್ ಹೆಸರಿನಲ್ಲಿ ಮಾರಾಟ ಮಾಡುತ್ತಿದರು. ಅದು ಜನರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದುದರಿಂದ ನಕಲಿ ಪನ್ನೀರ್ ಬಳಕೆಯನ್ನು ನಿಷೇಧಿಸಲಾಗಿದೆ. ಅಷ್ಟೇ ಅಲ್ಲ, ನಕಲಿ ಉತ್ಪನ್ನಗಳ ಉತ್ಪಾದನೆ, ದಾಸ್ತಾನು, ಮಾರಾಟ, ಬಳಕೆ, ಪ್ರದರ್ಶನ ಸಹ ಕಾನೂನುಬಾಹಿರ ಎಂದು ತಿಳಿಸಲಾಗಿದೆ. ಆದೇಶ ಉಲ್ಲಂಘಿಸಿದರೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ ಸುರಕ್ಷತಾ ಇಲಾಖೆ ಎಚ್ಚರಿಕೆ ನೀಡಿದೆ.

ಇನ್ನು ನಕಲಿ ಔಷಧಗಳ ತಯಾರಿಕೆ, ಸಾಗಾಟ ಮತ್ತು ಮಾರಾಟಗಳ ಸುತ್ತಲಿನ ದಾಳಿಯಂತೂ ರಾಜ್ಯದ ಜನತೆಯನ್ನು ಬೆಚ್ಚಿಬೀಳಿಸಿದೆ. ಬೆಂಗಳೂರು ದಕ್ಷಿಣ ತಾಲೂಕಿನ ಸಿ.ಕೆ. ತಾಂಡ್ಯಾ ಗ್ರಾಮದ ಫಾರ್ಮ್‌ಹೌಸ್ ಒಂದರಲ್ಲಿ ನಡೆಯುತ್ತಿದ್ದ ಬೃಹತ್ ನಕಲಿ ಔಷಧ ಲೇಬಲ್ ದಂಧೆಯನ್ನು ಪೊಲೀಸರು ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳ ಜಂಟಿ ತಂಡ ಭೇದಿಸಿದೆ. ಹೊರದೇಶ ಮತ್ತು ರಾಜ್ಯಗಳಿಂದ ತರಿಸಲಾಗುತ್ತಿದ್ದ ಕಡಿಮೆ ಬೆಲೆಯ ಹಾಗೂ ಅವಧಿ ಮುಗಿದ ಔಷಧಗಳಿಗೆ, ಬಹುರಾಷ್ಟ್ರೀಯ ಕಂಪನಿಗಳ ನಕಲಿ ಲೇಬಲ್ ಅಂಟಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗುತ್ತಿತ್ತು. ದಾಳಿಯ ವೇಳೆ 6 ಕೋಟಿ ಮೌಲ್ಯದ ಸರಕುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಆರೋಪಿಗಳನ್ನು ವಶಕ್ಕೆ ಪಡೆದು ತನಿಖೆ ಚುರುಕುಗೊಳಿಸಲಾಗಿದೆ.

ಹಾಗಂತ ಎಲ್ಲವೂ ಸರಿ ಇದೆ, ಸಚಿವರು ಕೈಗೊಂಡ ಕ್ರಮಗಳೆಲ್ಲವೂ ಅದ್ಭುತ ಅಂತಲ್ಲ. ಈಗಲೂ ಸಾರ್ವಜನಿಕ ಆಸ್ಪತ್ರೆಗಳ ಸ್ಥಿತಿ ಹಾಗೆಯೇ ಇದೆ. ಗುತ್ತಿಗೆ ಆಧಾರದ ಮೇಲೆ 1000 ವೈದ್ಯರ ನೇಮಕ ಕುಂಟುತ್ತಾ ಸಾಗಿದೆ. ಸಿಬ್ಬಂದಿ ನೇಮಕವಾಗಿಲ್ಲ, ಆಸ್ಪತ್ರೆ ಮೇಲ್ವಿಚಾರಣೆ ಕ್ರಮ ಆರಂಭವಾಗಿಲ್ಲ, ಆಯುಷ್ಮಾನ್ ಕರ್ನಾಟಕ ಜಾರಿಗೆ ಒತ್ತು ನೀಡಲಾಗಿಲ್ಲ, ಕ್ಯೂಆರ್ ದೂರು ವ್ಯವಸ್ಥೆ ಇನ್ನೂ ಜನಕ್ಕೆ ತಲುಪಿಲ್ಲ, ಮಹಿಳಾ ಆರೋಗ್ಯ ನೀತಿಗೆ ಚಾಲನೆ ಸಿಕ್ಕಿಲ್ಲ, ಬೈಕ್ ಆಂಬುಲೆನ್ಸ್ ಬೀದಿಗಿಳಿದಿಲ್ಲ, ವೆನ್ಲಾಕ್ ಅಭಿವೃದ್ಧಿ ಘೋಷಣೆಯ ಹಂತ ದಾಟಿ ಹೊರಬಂದಿಲ್ಲ.

ಪ್ರಜಾಪ್ರಭುತ್ವದ ನಿಜವಾದ ಪರೀಕ್ಷೆ ಇರುವುದೇ ಜನಹಿತ ನಿರ್ಧಾರ ತೆಗೆದುಕೊಳ್ಳುವುದರಲ್ಲಿ. ಜನರಿಗೆ ಅಗತ್ಯವಾದುದನ್ನು ನ್ಯಾಯಯುತವಾಗಿ ಮತ್ತು ಪಾರದರ್ಶಕವಾಗಿ ಕೈಗೊಳ್ಳುವುದರಲ್ಲಿ. ಆ ನಿಟ್ಟಿನಲ್ಲಿ ಡಿ.ಕೆ. ಶಿವಕುಮಾರ್ ಸಂಪುಟದಲ್ಲಿರುವ ಸಚಿವರ ಪೈಕಿ ಖಾದರ್ ಕೊಂಚ ಮುಂದಿದ್ದಾರೆ, ಜನಪರ ಕೆಲಸಗಳತ್ತ ಕಾರ್ಯೋನ್ಮುಖರಾಗಿದ್ದಾರೆ. ಅದು ಆರಂಭಶೂರತ್ವವಾಗದಿರಲಿ.

**ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ**

# ಮತದಾರರ ಪಟ್ಟಿಯಿಂದ 1.07 ಕೋಟಿ ಹೆಸರು ಔಟ್; ಬಳ್ಳಾರಿ-ವಿಜಯನಗರದಲ್ಲೇ 3.5 ಲಕ್ಷ ಹೆಸರು ಗಾಯಬ್

ಚುನಾವಣಾ ಆಯೋಗವು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ () ಕರಡು ಪ್ರಕಟಿಸಿದ್ದು, ರಾಜ್ಯದಲ್ಲಿ ಒಂದು ಕೋಟಿಗೂ ಹೆಚ್ಚು ಮತದಾರರನ್ನು ಪಟ್ಟಿಯಿಂದ ಹೊರಗಿಟ್ಟಿದೆ. ಸ್ಥಳಾಂತರ, ಮರಣ, ಗೈರುಹಾಜರಿ ಹಾಗೂ ನಕಲು ಸೇರಿದಂತೆ ವಿವಿಧ ಕಾರಣಗಳಿಂದ ಒಟ್ಟು 1.07 ಕೋಟಿಗೂ ಹೆಚ್ಚು ಮತದಾರರ ಹೆಸರುಗಳನ್ನು ಕೈಬಿಡಲಾಗಿದೆ. ಈ ಪೈಕಿ ಬಳ್ಳಾರಿ-ವಿಜಯನಗರದಲ್ಲೇ 3.5 ಲಕ್ಷ ಮತದಾರರ ಹೆಸರು ಹೊರಗುಳಿದಿದೆ.

ಪ್ರತಿ ಜಿಲ್ಲೆಯಲ್ಲಿ ಕಾರಣ ಕೊಟ್ಟು ಲಕ್ಷ ಲಕ್ಷ ಮತದಾರರ ಮತದಾನದ ಹಕ್ಕನ್ನು ಕಿತ್ತುಕೊಳ್ಳಲಾಗಿದೆ. ಅದರಲ್ಲೂ ಗಣಿನಾಡಿನಲ್ಲೂ ನಿರೀಕ್ಷೆಗೂ ಮೀರಿ ಮತದಾರರನ್ನು ಪಟ್ಟಿಯಿಂದ ಹೊರಗಿಡಲಾಗಿದೆ. ಬಳ್ಳಾರಿ ಜಿಲ್ಲೆಯಲ್ಲಿ 2 ಲಕ್ಷದ 23 ಸಾವಿರದ 279 ಮತದಾರರ ಹೆಸರನ್ನು ತೆಗೆದು ಹಾಕಲಾಗಿದೆ. ಅಂದರೆ ಜಿಲ್ಲೆಯಲ್ಲಿ ಒಟ್ಟು 12ಲಕ್ಷದ 29 ಸಾವಿರದ 586 ಮತದಾರರಿದ್ದು, ಶೇಕಡಾ 18.16ರಷ್ಟು ಅಂದರೆ 2,23,279 ಮತದಾರರನ್ನು ಕೈಬಿಡಲಾಗಿದೆ.

ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರದಲ್ಲೇ ಅತಿ ಹೆಚ್ಚು ಮತದಾರರನ್ನು ಪಟ್ಟಿಯಿಂದ ಹೊರಗಿಡಲಾಗಿದೆ. ಈ ಕ್ಷೇತ್ರದಲ್ಲಿ 2,79,144 ಮತದಾರರಿದ್ದು ಅದರಲ್ಲೀಗ 76,503 ಮತದಾರರ ಮತದಾನದ ಹಕ್ಕನ್ನು ಹತ್ತಿಕ್ಕಲಾಗಿದೆ. ಹಾಗೆಯೇ ಬಳ್ಳಾರಿ ಗ್ರಾಮೀಣ ಕ್ಷೇತ್ರದಲ್ಲಿ 2,51,321 ಮತದಾರರು ಇದ್ದು, ಅದರಲ್ಲಿ 51,357 ಮತದಾರರನ್ನು ಪಟ್ಟಿಯಿಂದ ಹೊರಗಿಡಲಾಗಿದೆ. ಸಂಡೂರು ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,42,174 ವೋಟರ್ಸ್ ಇದ್ದು, ಅದರಲ್ಲಿ 39,445 ಮತದಾರರನ್ನು ಪಟ್ಟಿಯಿಂದ ಬಿಡಲಾಗಿದೆ. ಸಿರುಗುಪ್ಪ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,28,277 ವೋಟರ್ಸ್ ಇದ್ದು, ಈ ಪೈಕಿ 32,105 ಜನರ ಮತಶಕ್ತಿ ಕಸಿದುಕೊಳ್ಳಲಾಗಿದೆ. ಹಾಗೆಯೇ ಕಂಪ್ಲಿ ಕ್ಷೇತ್ರದಲ್ಲಿ 2,28,666 ಜನರು ಮತದಾನದ ಹಕ್ಕು ಹೊಂದಿದ್ದು, ಇದರಲ್ಲಿ 23,884 ಜನರ ವೋಟ್ ಪವರ್ ಹತ್ತಿಕ್ಕಲಾಗಿದೆ.

ಇನ್ನು ವಿಜಯನಗರ ಜಿಲ್ಲೆಯಲ್ಲಿ ಒಟ್ಟು 11,42,732 ಮತದಾರರಿದ್ದು, ಈ ಪೈಕಿ ಈಗ 1,48,576 ಜನರನ್ನು ಮತಪಟ್ಟಿಯಿಂದ ಹೊರಗಿಡಲಾಗಿದೆ. ವಿಜಯನಗರ




ವಿಧಾನಸಭಾ ಕ್ಷೇತ್ರದಲ್ಲೇ 2,52,788 ಮತದಾರರಿದ್ದು, ಈ ಪೈಕಿ 41,694 ಮತದಾರರ ಹೆಸರನ್ನು ಡಿಲೀಟ್ ಮಾಡಲಾಗಿದೆ. ಹೂವಿನ ಹಡಗಲಿ ವಿಧಾನಸಭಾ ಕ್ಷೇತ್ರದಲ್ಲಿ 2,01,396 ಮತದಾರರಿದ್ದು, ಇದರಲ್ಲಿ 27,031 ಮತದಾರರ ಹಕ್ಕಿಗೆ ಕೊಳ್ಳಿ ಇಡಲಾಗಿದೆ.

ಹರಪನಹಳ್ಳಿ ಕ್ಷೇತ್ರದಲ್ಲಿ 2,28,914 ವೋಟರ್ಸ್ ಇದ್ದು, ಈ ಪೈಕಿ 29,726 ಜನರ ಮತದಾನದ ಪವರ್ ಅನ್ನ ಅಡಗಿಸಲಾಗಿದೆ. ಹಾಗೆಯೇ ಹಗರಿಬೊಮ್ಮನಹಳ್ಳಿ ಕ್ಷೇತ್ರದಲ್ಲಿ 2,43,632 ಒಟ್ಟು ಮತದಾರರಿದ್ದು, ಅದರಲ್ಲಿ 28,946 ಮತದಾರರನ್ನು ಪಟ್ಟಿಯಿಂದ ಹೊರಕಳಿಸಲಾಗಿದೆ. ಕೊನೆಯದಾಗಿ ಕೂಡ್ಲಿಗಿ ಕ್ಷೇತ್ರದಲ್ಲಿ 2,16,002 ವೋಟರ್ಸ್ ಪೈಕಿ 21,179 ಜನರ ಹೆಸರನ್ನು ಲಿಸ್ಟ್ ನಿಂದ ತೆಗೆದು ಹಾಕಲಾಗಿದೆ. ಈ ಮೂಲಕ ಬಳ್ಳಾರಿ-ವಿಜಯನಗರ ಜಿಲ್ಲೆಯಲ್ಲೇ ಮೂರುವರೆ ಲಕ್ಷ ಮತದಾರರನ್ನು ಮತದಾನದ ಪಟ್ಟಿಯಿಂದ ಹೊರಗಿಡಲಾಗಿದ್ದು, ಇದು ಆಘಾತಕಾರಿ ಸಂಗತಿ ಎಂದು ವಿಚಾರವಾದಿಗಳು, ಹೋರಾಟಗಾರರು ಆಕ್ರೋಶ ಹೊರಹಾಕಿದ್ದಾರೆ.

ಪ್ರತಿಕ್ರಿಯೆ ನೀಡಿರುವ ಹಿರಿಯ ಸಾಹಿತಿಗಳು, ಲೇಖಕರು ಹಾಗೂ ಹೋರಾಟಗಾರರಾದ ಪೀರ್ ಭಾಷಾ ಅವರು, ಎಸ್‌ಐಆರ್ ನಿಂದ ಹೊರಗಿಡಲ್ಪಟ್ಟವರನ್ನು ನೋಡಿದರೆ ಅವರು ಬಹುತೇಕರು ಕೆಳಜಾತಿಯವರು, ಹಿಂದುಳಿದವರು, ಶೋಷಿತರು ಹಾಗೂ ಅಲ್ಪಸಂಖ್ಯಾತರು ಆಗಿರುತ್ತಾರೆ. ಇದರಲ್ಲಿ ಜಾತಿ ಮತ್ತು ಧರ್ಮದ ಕಾರಣ ಪ್ರಮುಖವಾಗಿದೆ. ಅನಕ್ಷರತೆ, ಬಡತನ ಮತ್ತು ಕೂಲಿಗಾಗಿ ಗುಳೆ ಹೋಗುವಂಥಾದ್ದು ಇದಕ್ಕೆ ಪ್ರಮುಖ ಕಾರಣವಾಗಿದೆ. ದೇಶದ ನಾಗರಿಕರನ್ನು ಪ್ರಜಾಪ್ರಭುತ್ವದ ಪ್ರಕ್ರಿಯೆಯಿಂದ ಹೊರಗಿಡುವ ಮೂಲಕ ಪ್ರಜಾಪ್ರಭುತ್ವವನ್ನೇ ದುರ್ಬಲಗೊಳಿಸುವ ಪ್ರಯತ್ನ ಮಾಡಲಾಗುತ್ತಿದೆ. ಪ್ರಜ್ಞಾಪೂರ್ವಕವಾಗಿಯೇ ಎಸ್‌ಐಆರ್ ಪ್ರಕ್ರಿಯೆಯನ್ನು ಮಾಡಲಾಗ್ತಿದೆ ಎನ್ನುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಚುನಾವಣಾ ಆಯೋಗ ಕೇಂದ್ರ ಸರ್ಕಾರದ ನಿಯಂತ್ರಣದಲ್ಲಿ ಇದೆ ಎಂದರೂ ರಾಜ್ಯ ಸರ್ಕಾರಕ್ಕೂ ಅದರ ಮೇಲೆ ಅಧಿಕಾರ ಇರುತ್ತದೆ. ಹಾಗಾಗಿ ರಾಜ್ಯ ಸರ್ಕಾರ ಮಧ್ಯಪ್ರವೇಶ ಮಾಡಿ, ಪಟ್ಟಿಯಿಂದ ಹೊರಗಿಡಲ್ಪಟ್ಟವರನ್ನು ಮತ್ತೆ ಸೇರಿಸಲು ಆಡಳಿತಾತ್ಮಕ ಪ್ರಯತ್ನಗಳೆಲ್ಲವನ್ನೂ ಮಾಡಬೇಕು'' ಎಂದು ಆಗ್ರಹಿಸಿದ್ದಾರೆ.

ಚುನಾವಣಾ ಆಯೋಗದ ನಡೆಯನ್ನ ತೀವ್ರವಾಗಿ ಖಂಡಿಸಿರುವ ಮತಕಾವಲು ಸಮಿತಿಯ ವಿಜಯನಗರ ಜಿಲ್ಲಾ ಸಮಿತಿಯ ಪ್ರಧಾನ ಸಂಚಾಲಕರಾದ ವೀರಂಸಗಯ್ಯ ಅವರು, ''ಎಸ್‌ಐಆರ್ ಎನ್ನುವುದು ಅವೈಜ್ಞಾನಿಕ ಎಂದಿದ್ದಾರೆ. ಅಲ್ಲದೇ, ರಾಜ್ಯದಲ್ಲಿ ಒಬ್ಬರೇ ಒಬ್ಬರು ನೈಜ ಮತದಾರರು ಪಟ್ಟಿಯಿಂದ ಹೊರಗುಳಿದರೆ ಕರ್ನಾಟಕಕ್ಕೆ ಅದಕ್ಕಿಂತ ದೊಡ್ಡ ಅಪಮಾನ ಮತ್ತೊಂದಿಲ್ಲ. ಸದ್ಯಕ್ಕೆ ರಾಜ್ಯದಲ್ಲಿ ಚುನಾವಣೆ ಇಲ್ಲ. ಇನ್ನೂ ಒಂದು ವರ್ಷ ಎಸ್‌ಐಆರ್ ಪ್ರಕ್ರಿಯೆಯನ್ನು ಮುಂದುವರಿಸಬೇಕು ಎಂದು ರಾಜ್ಯ ಸರ್ಕಾರ ಕ್ಯಾಬಿನೆಟ್ ನಿರ್ಣಯ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಅಲ್ಲದೇ, ಮತಪಟ್ಟಿಯಿಂದ ಹೊರಗುಳಿದ ಮತದಾರನಿಗೆ ಚುನಾವಣಾ ಆಯೋಗ ನೋಟಿಸ್ ನೀಡಲು ಮುಂದಾಗಿದೆ. ಮತದಾರ ಏನು ತಪ್ಪು ಮಾಡಿದ್ದಾರೆ ಎಂದು ನೋಟಿಸ್ ಕೊಡ್ತೀರಿ ಎಂದು ಪ್ರಶ್ನಿಸಿದ್ದಾರೆ. ಈ ನಡೆ ಖಂಡಿಸಿ ಸೆಪ್ಟೆಂಬರ್ 1ರಂದು ಬೆಂಗಳೂರಿನಲ್ಲಿ ಚುನಾವಣಾ ಆಯೋಗದ ಕಚೇರಿ ಮುತ್ತಿಗೆ ಹಾಕಲಾಗುವುದು'' ಎಂದು ಆಕ್ರೋಶ ಹೊರಹಾಕಿದ್ದಾರೆ.

ಇನ್ನು, ಮತಪಟ್ಟಿಯಿಂದ ಹೊರಗುಳಿದವರು ಮತ್ತೆ ಸೇರ್ಪಡೆಯಾಗಲು ಸೆಪ್ಟೆಂಬರ್ 23ವರೆಗೂ ಕಾಲಾವಕಾಶ ನೀಡಲಾಗಿದೆ. ವಿವಿಧ ಕಾರಣಗಳಿಂದ ಡಿಲೀಟ್ ಆದವರು ಸಕಾರಣ ನೀಡಿ ಅಥವಾ ಫಾರಂ ನಂಬರ್ 6 ಅಥವಾ 8 ಅನ್ನು ಭರ್ತಿ ಮಾಡಿ ಮತ್ತೆ ಮತದಾರರ ಪಟ್ಟಿಗೆ ಸೇರ್ಪಡೆಯಾಗಬಹುದು. ಅಕ್ಟೋಬರ್ 27 ರಂದು ಅಂತಿಮ ಮತದಾರರ ಪಟ್ಟಿ ಬಿಡುಗಡೆಯಾಗಲಿದೆ. ಆದರೆ ಅಂತಿಮವಾಗಿ ಎಷ್ಟು ಜನರು ಮತಪಟ್ಟಿಯಿಂದ ಹೊರಗೆ ಉಳಿಯುತ್ತಾರೆ ಎನ್ನುವುದನ್ನು ಕಾದು ನೋಡಬೇಕಿದೆ.

# ಉತ್ತರ ಕನ್ನಡ 15 ಸಾವಿರ ಹೆಕ್ಟೇರ್ ಬಿತ್ತನೆ ಬಾಕಿ; ಭತ್ತ ಬೆಳೆಗಾರರಲ್ಲಿ ಹೆಚ್ಚಿದ ಆತಂಕ

ಮುಂಗಾರು ಮಳೆಯ ಮೇಲೆ ಭರವಸೆ ಇಟ್ಟು ಕೃಷಿ ಚಟುವಟಿಕೆಗೆ ಮುಂದಾಗಿದ್ದ ಉತ್ತರ ಕನ್ನಡ ಜಿಲ್ಲೆಯ ರೈತರಿಗೆ ಈ ಬಾರಿ ಮಳೆ ಕೈಕೊಟ್ಟಿದೆ. ಜುಲೈ ಅಂತ್ಯದ ವೇಳೆಗೆ ಜಿಲ್ಲೆಯಲ್ಲಿ 58,546 ಹೆಕ್ಟೇರ್ ಪ್ರದೇಶದಲ್ಲಿ ಮುಂಗಾರು ಬಿತ್ತನೆ ಮಾಡುವ ಗುರಿ ಹೊಂದಲಾಗಿದ್ದರೂ, 43,078 ಹೆಕ್ಟೇರ್‌ನಲ್ಲಷ್ಟೇ ಬಿತ್ತನೆ ಪೂರ್ಣಗೊಂಡಿದೆ. ಅಂದರೆ ಒಟ್ಟು ಗುರಿಯ ಪೈಕಿ ಸುಮಾರು ಶೇ.74ರಷ್ಟು ಪ್ರದೇಶ ಮಾತ್ರ ಕೃಷಿ ಚಟುವಟಿಕೆಗೆ ಒಳಪಟ್ಟಿದೆ. ಇನ್ನೂ 15,468 ಹೆಕ್ಟೇರ್ ಪ್ರದೇಶ ಬಿತ್ತನೆಗೆ ಬಾಕಿ ಉಳಿದಿದೆ.

ಜಿಲ್ಲೆಯ ಪ್ರಮುಖ ಕೃಷಿ ಬೆಳೆಯಾದ ಭತ್ತಕ್ಕೂ ಮಳೆ ಕೊರತೆಯ ಬಿಸಿ ತಟ್ಟಿದೆ. ಭತ್ತಕ್ಕೆ 36,868 ಹೆಕ್ಟೇರ್ ಬಿತ್ತನೆ ಗುರಿ



ನಿಗದಿಪಡಿಸಲಾಗಿದ್ದು, ಈವರೆಗೆ 22,907 ಹೆಕ್ಟೇರ್‌ನಲ್ಲಷ್ಟೇ ಪ್ರಗತಿ ಸಾಧಿಸಲಾಗಿದೆ. ಗುರಿಯೊಂದಿಗೆ ಹೋಲಿಸಿದರೆ ಸುಮಾರು 14 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಭತ್ತದ ಬಿತ್ತನೆ ಪೂರ್ಣಗೊಂಡಿಲ್ಲ. ಇದರಿಂದ ಜಿಲ್ಲೆಯ ಸಾಂಪ್ರದಾಯಿಕ ಭತ್ತದ ಕೃಷಿಯ ವಿಸ್ತೀರ್ಣ ಮತ್ತಷ್ಟು ಕುಗ್ಗುವ ಸಾಧ್ಯತೆ ಎದುರಾಗಿದೆ.

**ಘಟ್ಟ ಪ್ರದೇಶಕ್ಕೆ ಮಳೆ ಕೊರತೆ**

ಕರಾವಳಿ ಮತ್ತು ಘಟ್ಟದ ಮೇಲಿನ ಪ್ರದೇಶಗಳಲ್ಲಿ ಮಳೆಯ ಸ್ವರೂಪದಲ್ಲಿಯೇ ವ್ಯತ್ಯಾಸ ಕಂಡುಬಂದಿದೆ. ಕರಾವಳಿ ಭಾಗದಲ್ಲಿ ಮಳೆ ದುರ್ಬಲವಾಗಿದ್ದರೂ ಕೆಲವು ಕಡೆ ನಾಟಿ ಕಾರ್ಯಕ್ಕೆ ಅಗತ್ಯವಾದಷ್ಟು ನೀರು ಲಭ್ಯವಾಗಿರುವುದರಿಂದ ರೈತರು ನೇರ ಬಿತ್ತನೆಗಿಂತ ನಾಟಿ ಪದ್ಧತಿಗೆ ಹೆಚ್ಚಿನ ಒತ್ತು ನೀಡಿದ್ದಾರೆ. ಬಹುತೇಕ ಪ್ರದೇಶಗಳಲ್ಲಿ ನಾಟಿ ಕಾರ್ಯ ಮುಕ್ತಾಯದ ಹಂತ ತಲುಪಿದೆ.

ಆದರೆ ಶಿರಸಿ, ಸಿದ್ದಾಪುರ, ಯಲ್ಲಾಪುರ, ಜೋಯಿಡಾ ಸೇರಿದಂತೆ ಘಟ್ಟದ ಮೇಲಿನ ಹಲವು ತಾಲೂಕುಗಳಲ್ಲಿ ನಿರಂತರ ಮಳೆಯ ಕೊರತೆ ಕೃಷಿ ಚಟುವಟಿಕೆಗೆ ಅಡ್ಡಿಯಾಗಿದೆ. ಆರಂಭದಲ್ಲಿ ಕೆಲ ದಿನ ಉತ್ತಮ ಮಳೆ ಬಂದ ಬಳಿಕ ವಾತಾವರಣ ಮತ್ತೆ ಒಣಗಿದ್ದು, ನಂತರ ಬಂದ ಮಳೆ ಕೂಡ ಕೃಷಿಗೆ ಬೇಕಾದಷ್ಟು ಸತತವಾಗಿರಲಿಲ್ಲ.

ಮಳೆ ಕೈಕೊಟ್ಟ ಸಂದರ್ಭಗಳಲ್ಲಿ ಕೆಲ ರೈತರು ಪಂಪ್‌ಸೆಟ್ ಮೂಲಕ ಹೊಲಗಳಿಗೆ ನೀರು ಹಾಯಿಸಿ ಬಿತ್ತನೆ ಉಳಿಸಿಕೊಳ್ಳುವ ಪ್ರಯತ್ನ ಮಾಡಿದ್ದಾರೆ. ಆದರೆ ಎಲ್ಲ ರೈತರೂ ನೀರಾವರಿ ಸೌಲಭ್ಯ ಹೊಂದಿರದ ಕಾರಣ ಮಳೆಯನ್ನೇ ಅವಲಂಬಿಸಿರುವ ಕೃಷಿ ಪ್ರದೇಶಗಳಲ್ಲಿ ಸಮಸ್ಯೆ ಗಂಭೀರವಾಗಿದೆ.

**ಸಿದ್ದಾಪುರ, ಶಿರಸಿಯಲ್ಲಿ ಭತ್ತ ಬಿತ್ತನೆ ಕುಸಿತ**

ಭತ್ತದ ಬಿತ್ತನೆಗೆ ಸಂಬಂಧಿಸಿದಂತೆ ಸಿದ್ದಾಪುರ ತಾಲೂಕಿನಲ್ಲಿ ನಿರೀಕ್ಷಿತ ಪ್ರಗತಿ ಕಂಡುಬಂದಿಲ್ಲ. ಶಿರಸಿಯಲ್ಲಿಯೂ ಒಟ್ಟು ಕೃಷಿ ಗುರಿಗೆ ಹೋಲಿಸಿದರೆ ಬಿತ್ತನೆ ಪ್ರಮಾಣ ಕಡಿಮೆಯಾಗಿದೆ.

ಜಿಲ್ಲೆಯ ಮಟ್ಟದಲ್ಲಿ ನೋಡಿದರೆ ಭತ್ತದ ಗುರಿ 36,868 ಹೆಕ್ಟೇರ್ ಇದ್ದು, ಸಾಧನೆ 22,907 ಹೆಕ್ಟೇರ್‌ಗೆ ಸೀಮಿತವಾಗಿದೆ. ಕಳೆದ ಹಲವು ವರ್ಷಗಳಿಂದಲೇ ಭತ್ತದ ಕೃಷಿ ಪ್ರದೇಶ ಹಂತ ಹಂತವಾಗಿ ಇಳಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ಮಳೆ ಕೊರತೆ ಮತ್ತೊಂದು ಹೊಡೆತ ನೀಡುವ ಸಾಧ್ಯತೆ ಇದೆ.

ಜೊತೆಗೆ ಮಾತನಾಡಿದ ಇಂದೂರದ ಯುವ ಕೃಷಿಕ ಅರುಣ ಸಪ್ಪಣ್ಣನವರ, ''ಕಾಲಕ್ಕೆ ಸರಿಯಾಗಿ ಮಳೆ ಬಾರದೇ ಇರುವುದರಿಂದ ಈ ಸಲ ಬಿತ್ತನೆ ಮಾಡೋದೇ ದೊಡ್ಡ ಸವಾಲಾಯ್ತು. ಗದ್ದೆಗಳಿಗೆ ನೀರಿಲ್ಲದೆ ಬಿತ್ತನೆ ಬೀಜ ಒಣಗಿ ಹೋಗುವಂತಾಗಿದೆ. ಕರಾವಳಿ ಭಾಗದಲ್ಲಿ ಹೇಗೋ ನಾಟಿ ಮುಗಿಸಿದರೂ, ಘಟ್ಟದ ಮೇಲಿನ ಕಡೆಗಳಲ್ಲಿ ಮಳೆ ಕೈಕೊಟ್ಟಿರೋದರಿಂದ ರೈತರು ಕಂಗಾಲಾಗಿದ್ದಾರೆ. ಕೈಯಲ್ಲಿ ದುಡ್ಡು ಹಾಕಿ ಮಾಡಿದ ಕೃಷಿ ಕೈಸೇರುತ್ತೋ ಇಲ್ಲವೋ ಅನ್ನೋ ಆತಂಕ ದಿನೇ ದಿನೇ ಜಾಸ್ತಿಯಾಗ್ತಿದೆ.'' ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಮಳೆ ಕೊರತೆಯ ನಡುವೆಯೂ ಎಲ್ಲ ಬೆಳೆಗಳ ಪರಿಸ್ಥಿತಿ ಒಂದೇ ರೀತಿಯಾಗಿಲ್ಲ. ಮೆಕ್ಕೆಜೋಳ ಮತ್ತು ಕಬ್ಬು ಬೆಳೆಗಳಲ್ಲಿ ನಿಗದಿತ ಗುರಿಗಿಂತ ಹೆಚ್ಚಿನ ಪ್ರದೇಶದಲ್ಲಿ ಬಿತ್ತನೆ/ಕೃಷಿ ಚಟುವಟಿಕೆ ನಡೆದಿದೆ.

ಮೆಕ್ಕೆಜೋಳಕ್ಕೆ 3,625 ಹೆಕ್ಟೇರ್ ಗುರಿ ಇದ್ದರೆ 5,521 ಹೆಕ್ಟೇರ್‌ನಲ್ಲಿ ಬಿತ್ತನೆ ದಾಖಲಾಗಿದೆ. ಕಬ್ಬಿಗೆ 13,216 ಹೆಕ್ಟೇರ್ ಗುರಿ ಇದ್ದು 14,630 ಹೆಕ್ಟೇರ್ ಪ್ರದೇಶದಲ್ಲಿ ಸಾಧನೆ ಕಂಡುಬಂದಿದೆ.

ಇದಕ್ಕೆ ವಿರುದ್ಧವಾಗಿ ಹತ್ತಿ ಮತ್ತು ಸೋಯಾಬೀನ್ ಬೆಳೆಗಳ ಸ್ಥಿತಿ ನಿರಾಶಾದಾಯಕವಾಗಿದೆ. ಹತ್ತಿಗೆ 135 ಹೆಕ್ಟೇರ್ ಗುರಿ ಇದ್ದರೂ ಕೇವಲ 10 ಹೆಕ್ಟೇರ್‌ನಲ್ಲಿ ಮಾತ್ರ ಬಿತ್ತನೆಯಾಗಿದೆ. ಸೋಯಾಬೀನ್‌ಗೆ 10 ಹೆಕ್ಟೇರ್ ಗುರಿ ಇದ್ದು ಅಷ್ಟೇ ಪ್ರಮಾಣದಲ್ಲಿ ಸಾಧನೆಯಾಗಿದೆ.

**ತಾಲೂಕುವಾರು ಅಂಕಿ-ಅಂಶಗಳು**

ಜಿಲ್ಲೆಯ ತಾಲೂಕುವಾರು ಕೃಷಿ ಪ್ರಗತಿಯಲ್ಲೂ ಮಳೆಯ ಅಸಮಾನತೆಯ ಪರಿಣಾಮ ಸ್ಪಷ್ಟವಾಗಿ ಗೋಚರಿಸಿದೆ. ಕಾರವಾರದಲ್ಲಿ 752 ಹೆಕ್ಟೇರ್ ಕೃಷಿ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿ ಹೊಂದಲಾಗಿದ್ದು, 692 ಹೆಕ್ಟೇರ್‌ನಲ್ಲಿ ಚಟುವಟಿಕೆ ನಡೆದಿದೆ. ಅಂಕೋಲಾದಲ್ಲಿ 3,152 ಹೆಕ್ಟೇರ್ ಗುರಿಗೆ 2,757 ಹೆಕ್ಟೇರ್, ಕುಮಟಾದಲ್ಲಿ 1,850 ಹೆಕ್ಟೇರ್ ಗುರಿಗೆ 1,602 ಹೆಕ್ಟೇರ್ ಹಾಗೂ ಹೊನ್ನಾವರದಲ್ಲಿ 1,100 ಹೆಕ್ಟೇರ್ ಗುರಿಗೆ 1,051 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಪೂರ್ಣಗೊಂಡಿದೆ. ಭಟ್ಕಳದಲ್ಲಿ 1,242 ಹೆಕ್ಟೇರ್ ಗುರಿಯ ಎದುರು 1,216 ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಚಟುವಟಿಕೆ ನಡೆದಿದೆ.

ಘಟ್ಟದ ಮೇಲಿನ ತಾಲೂಕುಗಳಲ್ಲಿ ಮಾತ್ರ ಪರಿಸ್ಥಿತಿ ತುಂಬಾ ಭಿನ್ನವಾಗಿದೆ. ಶಿರಸಿಯಲ್ಲಿ 7,190 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿ ಇದ್ದರೂ ಜುಲೈ ಅಂತ್ಯದ ವೇಳೆಗೆ 1,033 ಹೆಕ್ಟೇರ್‌ನಲ್ಲಷ್ಟೇ ಸಾಧನೆಯಾಗಿದೆ. ಸಿದ್ದಾಪುರದಲ್ಲಿ 4,980 ಹೆಕ್ಟೇರ್ ಗುರಿಗೆ 1,622 ಹೆಕ್ಟೇರ್ ಹಾಗೂ ಯಲ್ಲಾಪುರದಲ್ಲಿ 2,410 ಹೆಕ್ಟೇರ್ ಗುರಿಗೆ 1,590 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆದಿದೆ. ಜೋಯಿಡಾದಲ್ಲಂತೂ 3,160 ಹೆಕ್ಟೇರ್ ಗುರಿಗೆ ಕೇವಲ 430 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಕೃಷಿ ಚಟುವಟಿಕೆ ನಡೆದಿದೆ.

ಇದಕ್ಕೆ ಹೋಲಿಸಿದರೆ ಮುಂಡಗೋಡ ಮತ್ತು ಹಳಿಯಾಳ ತಾಲೂಕುಗಳಲ್ಲಿ ಕೃಷಿ ಚಟುವಟಿಕೆ ಉತ್ತಮವಾಗಿದೆ. ಮುಂಡಗೋಡದಲ್ಲಿ 10,610 ಹೆಕ್ಟೇರ್ ಗುರಿಗೆ 9,790 ಹೆಕ್ಟೇರ್ ಹಾಗೂ ಹಳಿಯಾಳದಲ್ಲಿ 21,380 ಹೆಕ್ಟೇರ್ ಗುರಿಗೆ 20,595 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆದಿದೆ. ದಾಂಡೇಲಿಯಲ್ಲಿ 720 ಹೆಕ್ಟೇರ್ ಗುರಿಗೆ 700 ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಚಟುವಟಿಕೆ ಪೂರ್ಣಗೊಂಡಿದೆ.

ಒಟ್ಟಾರೆ ಜಿಲ್ಲೆಯ 58,546 ಹೆಕ್ಟೇರ್ ಕೃಷಿ ಪ್ರದೇಶದಲ್ಲಿ ಮುಂಗಾರು ಅವಧಿಯಲ್ಲಿ ಬಿತ್ತನೆ ಮಾಡುವ ಗುರಿ ಹೊಂದಲಾಗಿದ್ದು, ಜುಲೈ ಅಂತ್ಯದ ವೇಳೆಗೆ 43,078 ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆ ನಡೆದಿದೆ. ಹೀಗಾಗಿ 15,468 ಹೆಕ್ಟೇರ್ ಪ್ರದೇಶದಲ್ಲಿ ಕೃಷಿ ಚಟುವಟಿಕೆ ಇನ್ನೂ ಬಾಕಿ ಉಳಿದಿದೆ. ಮಳೆಯ ಪ್ರಮಾಣ ಸುಧಾರಿಸಿದರೆ ಉಳಿದ ಪ್ರದೇಶದಲ್ಲೂ ಬಿತ್ತನೆ ಚುರುಕುಗೊಳ್ಳುವ ನಿರೀಕ್ಷೆ ಕೃಷಿ ಇಲಾಖೆಯಲ್ಲಿದೆ.

**ತೋಟಗಾರಿಕೆ ಬೆಳೆಗೂ ಮಳೆಯ ಹೊಡೆತ**

ಕಡಿಮೆ ಮಳೆಯ ನಡುವೆಯೇ ಕೆಲ ಸಂದರ್ಭಗಳಲ್ಲಿ ಸುರಿದ ಭಾರಿ ಮಳೆ ತೋಟಗಾರಿಕೆ ಬೆಳೆಗಳಿಗೂ ಹಾನಿ ಉಂಟುಮಾಡಿದೆ. ಅಂಕೋಲಾ ತಾಲೂಕಿನಲ್ಲಿ ತೆಂಗಿನ ಬೆಳೆ ಹಾನಿಯಾಗಿದ್ದರೆ, ಹೊನ್ನಾವರದಲ್ಲಿ ತೆಂಗು ಹಾಗೂ ಅಡಕೆ ಬೆಳೆಗಳಿಗೆ ಹಾನಿಯಾಗಿದೆ.

ಆದರೆ ಜಿಲ್ಲೆಯ ಕೃಷಿ ಇಲಾಖೆಯ ಲಭ್ಯ ಮಾಹಿತಿ ಪ್ರಕಾರ, ವ್ಯಾಪಕ ಪ್ರಮಾಣದ ಬೆಳೆ ನಷ್ಟಕ್ಕಿಂತಲೂ ಸದ್ಯ ರೈತರನ್ನು ಕಾಡುತ್ತಿರುವ ಪ್ರಮುಖ ಆತಂಕ ಮಳೆಯ ಕೊರತೆಯೇ ಆಗಿದೆ. ಮುಂದಿನ ದಿನಗಳಲ್ಲಿ ಮಳೆ ಪ್ರಮಾಣ ಮತ್ತಷ್ಟು ಕುಸಿದರೆ ಈಗಾಗಲೇ ಬಿತ್ತನೆಯಾಗಿರುವ ಬೆಳೆಗಳ ಬೆಳವಣಿಗೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

ಉತ್ತರ ಕನ್ನಡದಲ್ಲಿ ಸಾಮಾನ್ಯವಾಗಿ ಆಗಸ್ಟ್ ತಿಂಗಳು ಮಳೆಯ ದೃಷ್ಟಿಯಿಂದ ಮಹತ್ವದ ಅವಧಿ. ಈ ಸಮಯದಲ್ಲಿ ಉತ್ತಮ ಮಳೆ ಬಂದರೆ ಬಾಕಿ ಇರುವ ಕೃಷಿ ಚಟುವಟಿಕೆಗಳಿಗೆ ವೇಗ ಸಿಗುವ ನಿರೀಕ್ಷೆ ಇರುತ್ತದೆ. ಆದರೆ ಈ ಬಾರಿ ಮಳೆಯ ವರ್ತನೆ ರೈತರ ನಿರೀಕ್ಷೆಗೆ ತಕ್ಕಂತೆ ಇಲ್ಲ.

ಜಿಲ್ಲೆಯಲ್ಲಿ ಭತ್ತದ ನಾಟಿ ಕಾರ್ಯ ಆಗಸ್ಟ್ ಮೂರನೇ ವಾರದವರೆಗೂ ನಡೆಯುವ ಹಿನ್ನೆಲೆಯಲ್ಲಿ ಇನ್ನೂ ಕೆಲವು ಪ್ರದೇಶಗಳಲ್ಲಿ ಕೃಷಿ ಚಟುವಟಿಕೆಗೆ ಅವಕಾಶವಿದೆ. ಸದ್ಯ ಮಳೆಯ ಪ್ರಮಾಣ ಸುಧಾರಿಸಿದರೆ ಬಿತ್ತನೆ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇದೆ. ಕೃಷಿ ಇಲಾಖೆ ಕೂಡ ಒಟ್ಟಾರೆ ಗುರಿಯ ಶೇ.90ರಿಂದ 95ರಷ್ಟು ಸಾಧನೆ ಆಗುವ ನಿರೀಕ್ಷೆ ಹೊಂದಿದೆ.

ಆದರೆ ಮಳೆ ಮತ್ತೆ ಕೈಕೊಟ್ಟರೆ ಈಗಾಗಲೇ ಬಿತ್ತನೆಯಾಗಿರುವ ಬೆಳೆಗಳಿಗೂ ನೀರಿನ ಕೊರತೆ ಎದುರಾಗಬಹುದು. ಹೀಗಾಗಿ ಉಳಿದ ಮುಂಗಾರು ಅವಧಿಯಲ್ಲಿ ಸುರಿಯುವ ಮಳೆಯೇ ಜಿಲ್ಲೆಯ ಕೃಷಿಯ ಮುಂದಿನ ಚಿತ್ರಣವನ್ನು ನಿರ್ಧರಿಸಲಿದೆ.

**ಕೃಷಿಯ ಮೇಲೆ ಬಿದ್ದ ಮಳೆ ಕೊರತೆಯ ಕರಿ ನೆರಳು**

58,546 ಹೆಕ್ಟೇರ್ -ಜಿಲ್ಲೆಯ ಮುಂಗಾರು ಬಿತ್ತನೆ ಗುರಿ

43,078 ಹೆಕ್ಟೇರ್ - ಜುಲೈ ಅಂತ್ಯದವರೆಗೆ ಸಾಧನೆ

15,468 ಹೆಕ್ಟೇರ್ - ಇನ್ನೂ ಬಿತ್ತನೆಗೆ ಬಾಕಿ

36,868 ಹೆಕ್ಟೇರ್ - ಭತ್ತದ ಬಿತ್ತನೆ ಗುರಿ

22,907 ಹೆಕ್ಟೇರ್ - ಭತ್ತದ ಸಾಧನೆ

14 ಸಾವಿರಕ್ಕೂ ಅಧಿಕ ಹೆಕ್ಟೇರ್ ಭತ್ತ ಬಿತ್ತನೆಗೆ ಬಾಕಿ ಇರುವ ಪ್ರದೇಶ

ಶೇ.73.6 - ಜಿಲ್ಲೆಯ ಒಟ್ಟಾರೆ ಬಿತ್ತನೆ ಸಾಧನೆ

ಮಳೆಯ ಕೊರತೆಯಿಂದ ಜಿಲ್ಲೆಯ ಕೃಷಿ ಚಟುವಟಿಕೆ ಅಸಮಾನಗೊಂಡಿದೆ. ಹಳಿಯಾಳ, ಮುಂಡಗೋಡದಂತಹ ಪ್ರದೇಶಗಳಲ್ಲಿ ಬಿತ್ತನೆ ಬಹುತೇಕ ಗುರಿಯ ಹತ್ತಿರ ತಲುಪಿದ್ದರೆ, ಶಿರಸಿ, ಜೋಯಿಡಾ ಮತ್ತು ಸಿದ್ದಾಪುರದಲ್ಲಿ ದೊಡ್ಡ ಪ್ರಮಾಣದ ಅಂತರ ಕಂಡುಬರುತ್ತಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR